ಬಳ್ಳಾರಿ । ವಿಜಯನಗರ । ಕೊಪ್ಪಳ । ಬೆಂಗಳೂರು । ದಾವಣಗೆರೆ । ಹುಬ್ಬಳ್ಳಿ
ಧಾರವಾಡ । ಹಾವೇರಿ । ಗದಗ । ರಾಯಚೂರು । ವಿಜಯನಗರ । ತುಮಕೂರು

ಅನಂತ ಜನಶಕ್ತಿ

ANANTA JANASHAKTHI — KANNADA DAILY NEWS PAPER

ಸಂಪಾದಕ: ಎಸ್.ವೆಂಕಟೇಸುಲು | ಬಳ್ಳಾರಿ ಜಿಲ್ಲೆಯಿಂದ ಪ್ರಕಟಿತ ಕನ್ನಡ ದೈನಿಕ | EDITOR : S VENKATESULU

ಸಂಪುಟ : 01 ಸಂಚಿಕೆ : 106 ರಿ.ನಂ : ಕೆಎನ್ಎಎನ್ / 26 / ಎ5487 ಬಳ್ಳಾರಿ ಸೋಮವಾರ ದಿನಾಂಕ : 09-11-2026 ಪುಟ : 04 ಬೆಲೆ : 2-00

ಚುರುಪಾರು ಸುದ್ದಿ

1,000 ವೈದ್ಯರ ನೇಮಕಾತಿಗೆ ಸಚಿವ ಸಂಪುಟದಿಂದ ಅನುಮೋದನೆ ನೀಡಲಾಗಿದೆ: ಆರೋಗ್ಯ ಸಚಿವ ಯುಟಿ ಖಾದರ್



ಬಳ್ಳಾರಿ: ರಾಜ್ಯದ ಆರೋಗ್ಯ ವ್ಯವಸ್ಥೆಯನ್ನು ಬಲಪಡಿಸುವ ನಿಟ್ಟಿನಲ್ಲಿ, ರಾಜ್ಯದಲ್ಲಿ 1,000 ವೈದ್ಯರನ್ನು ನೇಮಕ ಮಾಡಿಕೊಳ್ಳಲು ಸಚಿವ ಸಂಪುಟ ಅನುಮೋದನೆ ನೀಡಿದೆ ಎಂದು ಆರೋಗ್ಯ ಸಚಿವ ಯುಟಿ ಖಾದರ್ ಭಾನುವಾರ ತಿಳಿಸಿದ್ದಾರೆ.

ನಗರದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಸಚಿವರು, ನೇಮಕಾತಿ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ, ಹೊರಗುತ್ತಿಗೆ (ಔಟ್‌ಸೋರ್ಸಿಂಗ್) ಆಧಾರದ ಮೇಲೆ ವೈದ್ಯರು ಮತ್ತು ಸಿಬ್ಬಂದಿಯನ್ನು ನೇಮಿಸಿಕೊಳ್ಳಲು ಅನುಮತಿ ನೀಡಲಾಗಿದೆ ಎಂದು ಹೇಳಿದರು.

'ನೇರ ನೇಮಕಾತಿಯ ಮೂಲಕ ಈಗಾಗಲೇ 250 ವೈದ್ಯರನ್ನು ನೇಮಿಸಲಾಗಿದೆ. ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿನ ಎಲ್ಲ ಸಿಬ್ಬಂದಿ ಕಡ್ಡಾಯವಾಗಿ ಹಾಜರಿದ್ದು ಕರ್ತವ್ಯ ನಿರ್ವಹಿಸಬೇಕು. ಆಯಾ ಜಿಲ್ಲೆಗಳ ಅಗತ್ಯ–ಕ್ಕೆ ಅನುಗುಣವಾಗಿ ಹೊರಗುತ್ತಿಗೆ ಆಧಾರದ ಮೇಲೆ ಸಿಬ್ಬಂದಿಯನ್ನು ನೇಮಿಸಿಕೊಳ್ಳಲು ಅನುಮತಿ ನೀಡಲಾಗಿದೆ' ಎಂದು ಅವರು ಹೇಳಿದರು.

ಔಷಧಗಳ ಕೊರತೆಯ ಸಮಸ್ಯೆಯನ್ನು ಎರಡು ತಿಂಗಳೊಳಗೆ ಬಗೆಹರಿಸಲಾಗುವುದು ಮತ್ತು 350 ಹೊಸ ಆಂಬ್ಯುಲೆನ್ಸ್‌ಗಳನ್ನು ಖರೀದಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದೂ ಅವರು ತಿಳಿಸಿದರು. 2ನೇ ಪುಟಕ್ಕೆ...

ಪಟಾಕಿ ಅಂತ ಮದ್ದಿಗೆ ಬೆಂಕಿ ಹಚ್ಚಿದ ಬಾಲಕ; ಸ್ಫೋಟಗೊಂಡು ಸಾವು

ಕಲಬುರಗಿ : ಪಟಾಕಿ ಹಚ್ಚುವ ಸಂಭ್ರಮ ಕ್ಷಣಾರ್ಧದಲ್ಲೇ ಸಾವಿನ ದುರಂತವಾಗಿ ಬದಲಾಗಿದೆ. ದೀಪಾವಳಿ ಪಟಾಕಿ ಅಂತ ಕಾಡುಹಂದಿಗಳಿಗಾಗಿ ತಂದಿಟ್ಟಿದ್ದ ಸ್ಫೋಟಕ ಮದ್ದಿಗೆ ಬೆಂಕಿ ಹಚ್ಚಿದ 15 ವರ್ಷದ ಬಾಲಕ ಸ್ಥಳದಲ್ಲೇ ಸಾವನ್ನಪ್ಪಿದ್ದಾನೆ. ಭೀಮರಾಯ ಮೃತ ಬಾಲಕ. ಜಿಲ್ಲೆಯ ಸೇಡಂ ತಾಲೂಕಿನ ಹಂದರಕಿ ಗ್ರಾಮದಲ್ಲಿ ಈ ಘೋರ ದುರಂತ ನಡೆದಿದೆ.

ಕಲಬುರಗಿ ಜಿಲ್ಲೆಯ ಸೇಡಂ ತಾಲೂಕಿನ ಹಂದರಕಿ ಗ್ರಾಮದ ಬಾಲಕ ಭೀಮರಾಯ, ದೀಪಾವಳಿ ಪಟಾಕಿ ಅಂತ ಮನೆಯಲ್ಲಿ ಇಟ್ಟಿದ್ದ ಮದ್ದಿಗೆ ಬೆಂಕಿ ಹಚ್ಚಿದ್ದಾನೆ. ಆದರೆ ಅದು ಸಾಮಾನ್ಯ ಪಟಾಕಿಯಾಗಿರಲಿಲ್ಲ. ಕಾಡುಹಂದಿಗಳನ್ನ ಓಡಿಸಲು ತಂದಿಟ್ಟಿದ್ದ ಸ್ಫೋಟಕವಾಗಿತ್ತು. ಆ ಮದ್ದಿನ ಅಪಾಯ ಅರಿಯದ ಭೀಮರಾಯ, ಬೆಂಕಿ ಹಚ್ಚಿದ ಕ್ಷಣವೇ ದೊಡ್ಡ ಸ್ಫೋಟ ಸಂಭವಿಸಿದೆ. ಸ್ಫೋಟದ ತೀವ್ರತೆಗೆ ಬಾಲಕನ ತಲೆ ಛಿದ್ರಛಿದ್ರವಾಗಿದೆ.

ಬರೀ ಗಡ್ಡ ಬೆಳೆಸಿದರೇ ಸಾಲದು, ಸಿಎಂ ರೇವಂತ್ ರೆಡ್ಡಿ



ಹೈದರಾಬಾದ್: ತೆಲಂಗಾಣ ಮುಖ್ಯಮಂತ್ರಿ ಎ. ರೇವಂತ್ ರೆಡ್ಡಿ ಶನಿವಾರ ಭಾರತ ರಾಷ್ಟ್ರ ಸಮಿತಿ ಕಾರ್ಯಾಧ್ಯಕ್ಷ ಕೆ.ಟಿ. ರಾಮರಾವ್ ಅವರನ್ನು ಗುರಿಯಾಗಿಸಿಕೊಂಡರು. ರಾಮರಾವ್ ತಮ್ಮ ಲುಕ್ ಅನ್ನು ನಕಲು ಮಾಡಿದ್ದಾರೆ ಎಂದು ಆರೋಪಿಸಿದರು. ಕೇವಲ ಗಡ್ಡ ಬೆಳೆಸುವುದರಿಂದ ರೇವಂತ್ ರೆಡ್ಡಿ ಆಗುವುದಿಲ್ಲ ಎಂದು ಹೇಳಿದರು. ಯಾವುದೇ ದೃಢವಾದ ಆಧಾರವಿಲ್ಲದ ರಾಜಕೀಯ ಭಂಗಿಯು ಹುಲಿ ಎಂದು ತನ್ನನ್ನು ತಾನು ಬಿಂಬಿಸಿಕೊಳ್ಳಲು ಪ್ರಯತ್ನಿಸುವ ನರಿಯಂತೆ. ಆ ಕೇವಲ ಅನುಕರಣೆ ಕೆ.ಟಿ. ರಾಮರಾವ್ (ಕೆಟಿಆರ್ ಎಂದು ಕರೆಯಲ್ಪಡುವ) ಮತದಾರರ ವಿಶ್ವಾಸವನ್ನು ಗೆಲ್ಲುವುದಿಲ್ಲ ಎಂದು ರೆಡ್ಡಿ ಹೇಳಿದರು.

ವಿಕಾರಾಬಾದ್‌ನಲ್ಲಿ ನಡೆದ ಸಭೆಯನ್ನುದ್ದೇಶಿಸಿ ಮಾತನಾಡಿದ ರೆಡ್ಡಿ, ನರಿ ಹುಲಿಯ ಪಟ್ಟೆಗಳನ್ನು ಅನುಕರಿಸಿ ಹುಲಿಯಾಗಲು ಸಾಧ್ಯವಿಲ್ಲದಂತೆಯೇ, ನೀವು ಯಾರನ್ನಾದರೂ ಅನುಕರಿಸಿ ಹುಲಿಯಾಗಲು ಸಾಧ್ಯವಿಲ್ಲ ಎಂದು ಹೇಳಿದರು.

ಎಥೆನಾಲ್ ಮಿಶ್ರಿತ ಪೆಟ್ರೋಲ್‌ನಿಂದ ವಾಹನಗಳ ಇಂಜಿನ್‌ಗಳಿಗೆ ಹಾನಿ; ಮೈಲೇಜ್ ಕೂಡ ಕಡಿಮೆ: ಸಿಎಂ ಡಿಕೆಶಿ ಆರೋಪ

67 ಕಡೆಗಳಲ್ಲಿ ರಾಜ್ಯ ಸರ್ಕಾರದಿಂದ ಪರಿಶೀಲನೆ; ಇಂದು ಸಚಿವರಿಂದ ಅಧಿಕೃತ ಮಾಹಿತಿ



ಬೆಂಗಳೂರು : ಪೆಟ್ರೋಲ್‌ನಲ್ಲಿ ಎಥೆನಾಲ್ ಮಿಶ್ರಣದ ವಿಚಾರ ಇದೀಗ ರಾಜ್ಯ ರಾಜಕಾರಣದಲ್ಲಿ ಭಾರಿ ಚರ್ಚೆಗೆ ಗ್ರಾಸವಾಗಿದೆ. ಎಥೆನಾಲ್ ಮಿಶ್ರಿತ ಪೆಟ್ರೋಲ್ ಬಳಕೆಯಿಂದ ವಾಹನಗಳ ಇಂಜಿನ್‌ಗಳಲ್ಲಿ ತಾಂತ್ರಿಕ ದೋಷಗಳು ಕಾಣಿಸಿಕೊಳ್ಳುತ್ತಿದ್ದು, ವಾಹನಗಳ ಮೈಲೇಜ್ ಕೂಡ ಗಣನೀಯವಾಗಿ ಕಡಿಮೆಯಾಗುತ್ತಿದೆ ಎಂಬ ಗಂಭೀರ ಆರೋಪವನ್ನು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಾಡಿದ್ದಾರೆ. ರಾಜ್ಯದಲ್ಲಿ ಸಾವಿರಾರು ವಾಹನಗಳ ಇಂಜಿನ್‌ಗಳಿಗೆ ಸಮಸ್ಯೆಯಾಗುತ್ತಿರುವ ಕುರಿತು ದೂರುಗಳು ಕೇಳಿಬಂದಿದ್ದು, ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಪರಿಶೀಲನೆ ನಡೆಸಿದೆ ಎಂದು ಅವರು ತಿಳಿಸಿದ್ದಾರೆ.

ನಗರದಲ್ಲಿ ಭಾನುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಡಿ.ಕೆ. ಶಿವಕುಮಾರ್, ಪೆಟ್ರೋಲ್‌ನಲ್ಲಿ ಎಥೆನಾಲ್ ಮಿಶ್ರಣದ ಕುರಿತು ಹಲವು ಆರೋಪಗಳು ಕೇಳಿಬಂದಿವೆ. ಈ ವಿಚಾರವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ಕೇಂದ್ರ ಸರ್ಕಾರಕ್ಕೂ ಅಗತ್ಯ ಮಾಹಿತಿ ನೀಡಲಾಗಿದೆ. ರಾಜ್ಯದ ವಿವಿಧೆಡೆ ಒಟ್ಟು 67 ಕಡೆಗಳಲ್ಲಿ ಪರಿಶೀಲನೆ ನಡೆಸಲಾಗಿದೆ. ಈ ಪರಿಶೀಲನೆಯ ವೇಳೆ ಪೆಟ್ರೋಲ್ ಬಂಕ್‌ಗಳಲ್ಲಿ ನೇರವಾಗಿ 2ನೇ ಪುಟಕ್ಕೆ...

ಧ್ಯಾನದಿಂದ ನೆಮ್ಮದಿಯ ಬದುಕು ಸಾಧ್ಯ: ಸಚಿವ ಬಸವಂತಪ್ಪ ರಾಜ್ಯೋತ್ಸವ, ದೀಪಾವಳಿ ಸಂಭ್ರಮದಲ್ಲಿ ಸಾಧಕರಿಗೆ ಸನ್ಮಾನ



ದಾವಣಗೆರೆ: ಆಧುನಿಕ ಜೀವನದ ಒತ್ತಡ, ಸ್ಪರ್ಧೆ ಹಾಗೂ ಆತಂಕಗಳ ನಡುವೆ ಮನುಷ್ಯ ಮಾನಸಿಕ ನೆಮ್ಮದಿ ಕಂಡುಕೊಳ್ಳುವುದು ಅತ್ಯಂತ ಅಗತ್ಯವಾಗಿದೆ. ಆಧ್ಯಾತ್ಮಿಕ ಚಿಂತನೆ, ಧ್ಯಾನ ಮತ್ತು ಸಕಾರಾತ್ಮಕ ಮನೋಭಾವ ಬೆಳೆಸಿಕೊಳ್ಳುವುದರಿಂದ ನೆಮ್ಮದಿಯ ಬದುಕು ರೂಪಿಸಿಕೊಳ್ಳಲು ಸಾಧ್ಯ ಎಂದು ಮುಜರಾಯಿ, ಮೀನುಗಾರಿಕೆ, ಬಂದರು ಹಾಗೂ ಒಳನಾಡು ಜಲಸಾರಿಗೆ ಸಚಿವ ಕೆ.ಎಸ್. ಬಸವಂತಪ್ಪ ಹೇಳಿದರು.

ನಗರದ ಶಿವ ಧ್ಯಾನ ಮಂದಿರದಲ್ಲಿ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ 2ನೇ ಪುಟಕ್ಕೆ...

ವಿಕಲಚೇತನರಿಗೆ ಸರ್ಕಾರದ ಸೌಲಭ್ಯ ಸದುಪಯೋಗವಾಗಲಿ: ಸಚಿವ ಕೆ.ಎಸ್.ಬಸವಂತಪ್ಪ



ದಾವಣಗೆರೆ: ವಿಕಲಚೇತನರ ಕಲ್ಯಾಣಕ್ಕಾಗಿ ಸರ್ಕಾರ ಹಲವು ಯೋಜನೆ ಹಾಗೂ ಸೌಲಭ್ಯಗಳನ್ನು ಜಾರಿಗೊಳಿಸಿದ್ದು, ಅರ್ಹ ಫಲಾನುಭವಿಗಳು ಅವುಗಳನ್ನು ಸದುಪಯೋಗಪಡಿಸಿಕೊಳ್ಳಬೇಕು. ಸರ್ಕಾರ ನೀಡುವ ಸೌಲಭ್ಯಗಳನ್ನು ದುರುಪಯೋಗ ಪಡಿಸಿಕೊಳ್ಳಬಾರದು ಎಂದು ಮುಜರಾಯಿ, ಮೀನುಗಾರಿಕೆ, ಬಂದರು ಹಾಗೂ ಒಳನಾಡು ಜಲಸಾರಿಗೆ ಸಚಿವ ಕೆ.ಎಸ್. ಬಸವಂತಪ್ಪ ಸಲಹೆ ನೀಡಿದರು.

ನಗರದ ಹಳೆ ಪ್ರವಾಸಿ ಮಂದಿರದಲ್ಲಿ 2ನೇ ಪುಟಕ್ಕೆ...

ಸಮಯಕ್ಕೆ ಬಾರದ ಮುತ್ಕೂರು ಗ್ರಾಪಂ ಪಿಡಿಒ; ಸಾರ್ವಜನಿಕರ ಸಮಯ ವ್ಯರ್ಥ–ಮೇಲಧಿಕಾರಿಗಳು ಗಮನಹರಿಸಲು ಒತ್ತಾಯ



ಹಗರಿಬೊಮ್ಮನಹಳ್ಳಿ : ವಿಜಯನಗರ ಜಿಲ್ಲೆಯ ಹಗರಿಬೊಮ್ಮನಹಳ್ಳಿ ತಾಲೂಕು ವ್ಯಾಪ್ತಿಗೆ ಬರುವ ಮುತ್ತುಗೂರು ಗ್ರಾಮ ಪಂಚಾಯಿತಿಯ ಮಹಾತ್ಮ ಗಾಂಧಿ ಗ್ರಾಮ ಪಂಚಾಯಿತಿ ಕಾರ್ಯಾಲಯದಲ್ಲಿ ಅಧಿಕಾರಿಗಳ ಸಮಯ ಪಾಲನೆ ಕುರಿತು ಸಾರ್ವಜನಿಕರಿಂದ ಅಸಮಾಧಾನ ವ್ಯಕ್ತವಾಗಿದೆ.

ಮುತ್ತುಗೂರು ಗ್ರಾಮ ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿ ಪಿಡಿಒ ರೇವಣಸಿದ್ದಯ್ಯ ಅವರು ನಿಗದಿತ ಸಮಯಕ್ಕೆ ಕಚೇರಿಗೆ ಹಾಜರಾಗುತ್ತಿಲ್ಲ ಎಂಬ ಆರೋಪವನ್ನು ಗ್ರಾಮಸ್ಥರು ಮಾಡಿದ್ದಾರೆ. ಸಾರ್ವಜನಿಕರ ಪ್ರಕಾರ, ಪಿಡಿಒ ಅವರು ಪ್ರತಿದಿನವೂ ತಡವಾಗಿ, ಸುಮಾರು ಮಧ್ಯಾಹ್ನ 12ರಿಂದ 12.30ರ ವೇಳೆಗೆ ಪಂಚಾಯಿತಿ ಕಚೇರಿಗೆ ಬರುತ್ತಾರೆ ಎನ್ನಲಾಗುತ್ತಿದೆ. ಇದರಿಂದ ತಮ್ಮ ಕೆಲಸ ಕಾರ್ಯಗಳನ್ನು ಬದಿಗೊತ್ತಿ ಪಂಚಾಯಿತಿಗೆ ಬರುವ ಜನರು ಅಧಿಕಾರಿಗಾಗಿ ಕಾದು ಕುಳಿತುಕೊಳ್ಳಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಗ್ರಾಮಸ್ಥರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಗ್ರಾಮ ಪಂಚಾಯಿತಿ ಕಚೇರಿ ಎಂದರೆ ಗ್ರಾಮಸ್ಥರ ದಿನನಿತ್ಯದ ಹಲವು ಅಗತ್ಯ ಕೆಲಸಗಳಿಗೆ ಸಂಬಂಧಿಸಿದ ಪ್ರಮುಖ ಆಡಳಿತ ಕೇಂದ್ರ. ವಿವಿಧ ದಾಖಲೆಗಳು, ಪ್ರಮಾಣಪತ್ರಗಳು, ಸರ್ಕಾರಿ ಯೋಜನೆಗಳು, ವಸತಿ ಸೌಲಭ್ಯ, ಕುಡಿಯುವ ನೀರು, ರಸ್ತೆ, ಚರಂಡಿ, ಸ್ವಚ್ಛತೆ ಸೇರಿದಂತೆ ಹಲವಾರು ವಿಚಾರಗಳಿಗಾಗಿ ಗ್ರಾಮಸ್ಥರು ಪಂಚಾಯಿತಿ ಕಚೇರಿಯನ್ನು 2ನೇ ಪುಟಕ್ಕೆ...

ದೇಶದ ಭದ್ರತೆಗಾಗಿ ನಕ್ಸಲ್ ಮನಸ್ಥಿತಿಯವರನ್ನು ಗುರುತಿಸಿ ಸೋಲಿಸಿ': ಯೋಧರೊಂದಿಗೆ ದೀಪಾವಳಿ ಆಚರಿಸಿದ ಪ್ರಧಾನಿ ಮೋದಿ



ಬಸ್ತಾರ್(ಛತ್ತೀಸ್‌ಗಢ): "ದಿಮಾಗಿ ನಕ್ಸಲರ" (ನಕ್ಸಲ್ ಮನಸ್ಥಿತಿಯವರು) ಬಗ್ಗೆ ಎಚ್ಚರಿಕೆ ನೀಡಿದ ಪ್ರಧಾನಿ ನರೇಂದ್ರ ಮೋದಿ, ದೇಶದ ಭದ್ರತೆಗಾಗಿ ಇವರನ್ನು ಗುರುತಿಸಿ, ಸೋಲಿಸಬೇಕಾದ ಅಗತ್ಯವಿದೆ ಎಂದು ಕರೆ ಕೊಟ್ಟರು.

ಛತ್ತೀಸ್ ಗಢದ ಬಸ್ತರ್ ಜಿಲ್ಲೆಯಲ್ಲಿರುವ ಸಿಆರ್‌ಪಿಎಫ್ ಶಿಬಿರದಲ್ಲಿ ಇಂದು ಭದ್ರತಾ ಸಿಬ್ಬಂದಿಯೊಂದಿಗೆ ದೀಪಾವಳಿ ಆಚರಿಸಿ ಅವರು ಮಾತನಾಡಿದರು.

"ನಕ್ಸಲಿಸಂ ಅಂತ್ಯಗೊಂಡಿರಬಹುದು, ಆದರೆ ಅದರ ಬೆದರಿಕೆ ಇನ್ನೂ ಸಂಪೂರ್ಣವಾಗಿ ಮಾಯವಾಗಿಲ್ಲ. ಕಾಡುಗಳಿಂದ ಸಶಸ್ತ್ರ ನಕ್ಸಲರನ್ನು ನಿರ್ಮೂಲನೆ ಮಾಡಿರಬಹುದು. 5ನೇ ಪುಟಕ್ಕೆ...

ಚಿರಿಬಿಯಲ್ಲಿ ಪ್ರಜಾ ಸೇವಾ ಆಂದೋಲನ ಕಾರ್ಯಕ್ರಮ

ಈ ದಿನ ಚಿರಿಬಿಯಲ್ಲಿ 30 ಅರ್ಜಿಗಳ ಸ್ವೀಕಾರ; ಸಾರ್ವಜನಿಕ ಸಮಸ್ಯೆಗಳಿಗೆ ಸ್ಥಳದಲ್ಲೇ ಸ್ಪಂದಿಸಲು ಅಧಿಕಾರಿಗಳ ಭರವಸೆ



ಕೊಟ್ಟೂರು : ಸಾರ್ವಜನಿಕರ ವೈಯಕ್ತಿಕ ಹಾಗೂ ಗ್ರಾಮಕ್ಕೆ ಸಂಬಂಧಿಸಿದ ವಿವಿಧ ಸಮಸ್ಯೆಗಳನ್ನು ಅಧಿಕಾರಿಗಳ ಗಮನಕ್ಕೆ ತಂದು ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದ ಕೊಟ್ಟೂರು ತಾಲೂಕಿನ ಚಿರಿಬಿ ಗ್ರಾಮದಲ್ಲಿ ಶನಿವಾರ ಪ್ರಜಾ ಸೇವಾ ಆಂದೋಲನ ಕಾರ್ಯಕ್ರಮ ನಡೆಯಿತು.

ಗ್ರೇಡ್–2 ತಹಶೀಲ್ದಾರ್ ಎಂ. ಪ್ರತಿಭಾ ಅವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸಾರ್ವಜನಿಕರು ತಮ್ಮ ವೈಯಕ್ತಿಕ ಹಾಗೂ ಸಾರ್ವಜನಿಕ ಸಮಸ್ಯೆಗಳನ್ನು ನೇರವಾಗಿ ಅಧಿಕಾರಿಗಳ ಗಮನಕ್ಕೆ ತಂದು ಪರಿಹಾರ ಕಂಡುಕೊಳ್ಳಲು ಪ್ರಜಾ ಸೇವಾ ಆಂದೋಲನವು ಉತ್ತಮ ವೇದಿಕೆಯಾಗಿದೆ ಎಂದು ಹೇಳಿದರು.

ಸರ್ಕಾರಿ ಕಚೇರಿಗಳಿಗೆ ತೆರಳಿ ತಮ್ಮ ಸಮಸ್ಯೆಗಳನ್ನು ಹೇಳಿಕೊಳ್ಳಲು ಸಾಧ್ಯವಾಗದ ವೃದ್ಧರು, ಅಂಗವಿಕಲರು, ಅಸಹಾಯಕರು ಹಾಗೂ ಗ್ರಾಮೀಣ ಭಾಗದ ಜನರ ಸಮಸ್ಯೆಗಳನ್ನು ಅವರಿರುವ ಸ್ಥಳದಲ್ಲಿಯೇ ಆಲಿಸಿ ಪರಿಹಾರ ಒದಗಿಸುವುದು ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ. ಅಧಿಕಾರಿಗಳು ಜನರ ಬಳಿಗೆ ತೆರಳಿ ಅವರ ಸಮಸ್ಯೆಗಳನ್ನು ಆಲಿಸುವ 2ನೇ ಪುಟಕ್ಕೆ...

ಎಥೆನಾಲ್ ಮಿಶ್ರಿತ ಪೆಟ್ರೋಲ್‌ನಿಂದ ವಾಹನಗಳ ಇಂಜಿನ್‌ಗಳಿಗೆ ಹಾನಿ;

ಮೈಲೇಜ್ ಕೂಡ ಕಡಿಮೆ: ಸಿಎಂ ಡಿಕೆಶಿ ಆರೋಪ

67 ಕಡೆಗಳಲ್ಲಿ ರಾಜ್ಯ ಸರ್ಕಾರದಿಂದ ಪರಿಶೀಲನೆ; ಇಂದು ಸಚಿವರಿಂದ ಅಧಿಕೃತ ಮಾಹಿತಿ

1ನೇ ಪುಟದಿಂದ..

ಎಥೆನಾಲ್ ಮಿಶ್ರಣ ನಡೆಯುತ್ತಿಲ್ಲ ಎಂಬ ಮಾಹಿತಿ ಲಭ್ಯವಾಗಿದೆ. ಬದಲಾಗಿ ಪೆಟ್ರೋಲ್ ವಿತರಣಾ ವ್ಯವಸ್ಥೆಯಲ್ಲಿನ ಡಿಸ್ಪೆನ್ಸರ್‌ಗಳ ಹಂತದಲ್ಲಿಯೇ ಮಿಶ್ರಣ ನಡೆಯುತ್ತಿದೆ ಎಂಬ ಆರೋಪ ಕೇಳಿಬಂದಿದೆ ಎಂದು ಹೇಳಿದರು.

ಪೆಟ್ರೋಲ್‌ನಲ್ಲಿ ನಿಗದಿತ ಪ್ರಮಾಣಕ್ಕಿಂತ ಹೆಚ್ಚಿನ ಎಥೆನಾಲ್ ಮಿಶ್ರಣವಾಗುತ್ತಿದೆಯೇ ಎಂಬ ಅನುಮಾನಗಳು ವ್ಯಕ್ತವಾಗುತ್ತಿವೆ. ಇದರಿಂದ ವಾಹನಗಳ ಇಂಜಿನ್‌ಗಳ ಕಾರ್ಯಕ್ಷಮತೆ ಕುಸಿಯುತ್ತಿದೆಯೇ, ಮೈಲೇಜ್ ಕಡಿಮೆಯಾಗುತ್ತಿದೆಯೇ ಎಂಬುದರ ಕುರಿತು ಸಮಗ್ರ ಪರಿಶೀಲನೆ ಅಗತ್ಯವಿದೆ. ಎಥೆನಾಲ್ ಬಳಕೆಯಿಂದ ದೇಶಾದ್ಯಂತ ವಾಹನ ಸವಾರರಿಗೆ ಸಮಸ್ಯೆಯಾಗುತ್ತಿದೆ ಎಂಬ ಆರೋಪಗಳೂ ಕೇಳಿಬರುತ್ತಿವೆ. ಈ ವಿಚಾರದಲ್ಲಿ ಸರ್ಕಾರ ಅಗತ್ಯ ಕ್ರಮಗಳನ್ನು ಕೈಗೊಳ್ಳಲಿದೆ. ಪರಿಶೀಲನೆಯ ಸಂಪೂರ್ಣ ವಿವರಗಳನ್ನು ಸಂಬಂಧಪಟ್ಟ ಸಚಿವರು ಸೋಮವಾರ ಸುದ್ದಿಗೋಷ್ಠಿ ನಡೆಸಿ ಅಧಿಕೃತವಾಗಿ ಪ್ರಕಟಿಸಲಿದ್ದಾರೆ ಎಂದು ತಿಳಿಸಿದರು.

ಎಥೆನಾಲ್ ಮಿಶ್ರಣದ ವಿಚಾರವಾಗಿ ಮಾತನಾಡಿದ ಉಪಮುಖ್ಯಮಂತ್ರಿಗಳು ವಿರೋಧ ಪಕ್ಷಗಳ ವಿರುದ್ಧವೂ ವಾಗ್ದಾಳಿ ನಡೆಸಿದರು. ವಾಹನಗಳ ಇಂಜಿನ್‌ಗಳಿಗೆ ಹಾನಿಯಾಗುತ್ತಿದೆ, ಮೈಲೇಜ್ ಕಡಿಮೆಯಾಗುತ್ತಿದೆ ಎಂಬ ಗಂಭೀರ ಆರೋಪಗಳು ಕೇಳಿಬರುತ್ತಿದ್ದರೂ ವಿರೋಧ ಪಕ್ಷದ ನಾಯಕರು ಈ ಕುರಿತು ಸಮರ್ಪಕವಾಗಿ ಧ್ವನಿ ಎತ್ತುತ್ತಿಲ್ಲ ಎಂದು ಟೀಕಿಸಿದರು. ಜನಸಾಮಾನ್ಯರು ಪ್ರತಿದಿನ ಪೆಟ್ರೋಲ್ ಖರೀದಿಸಿ ವಾಹನಗಳನ್ನು ಬಳಸುತ್ತಾರೆ. ಇಂತಹ ಸಂದರ್ಭದಲ್ಲಿ ಇಂಧನದ ಗುಣಮಟ್ಟದ ಬಗ್ಗೆ ಉಂಟಾಗಿರುವ ಅನುಮಾನಗಳನ್ನು ನಿವಾರಿಸುವುದು ಸರ್ಕಾರಗಳ ಜವಾಬ್ದಾರಿಯಾಗಿದೆ. ಈ ವಿಚಾರದಲ್ಲಿ ಕೇಂದ್ರ ಸರ್ಕಾರವೂ ಸ್ಪಷ್ಟನೆ ನೀಡಬೇಕು ಎಂದು ಅಭಿಪ್ರಾಯಪಟ್ಟರು.

ಇದೇ ಸಂದರ್ಭದಲ್ಲಿ ಕೇಂದ್ರ ಸರ್ಕಾರದ ಬೆಲೆ ನೀತಿಯನ್ನು ಟೀಕಿಸಿದ ಡಿ.ಕೆ. ಶಿವಕುಮಾರ್, ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಹೆಚ್ಚಿಸುವ ಮೂಲಕ ಕೇಂದ್ರ ಸರ್ಕಾರ ಜನಸಾಮಾನ್ಯರ ಮೇಲೆ ಆರ್ಥಿಕ ಹೊರೆ ಹೇರುತ್ತಿದೆ ಎಂದು ಆರೋಪಿಸಿದರು. ಬೆಲೆ ಏರಿಕೆಯ ವಿಚಾರದಲ್ಲಿ ರಾಜ್ಯ ಸರ್ಕಾರವನ್ನು ಟೀಕಿಸುವ ವಿರೋಧ ಪಕ್ಷದ ನಾಯಕರು ಕೇಂದ್ರ ಸರ್ಕಾರದ ಬೆಲೆ ನೀತಿಯ ಬಗ್ಗೆಯೂ ಮಾತನಾಡಬೇಕು ಎಂದು ಹೇಳಿದರು. ರಾಜ್ಯ ಸರ್ಕಾರ ಐದು ಗ್ಯಾರಂಟಿ ಯೋಜನೆಗಳ ಮೂಲಕ ಜನರಿಗೆ ಆರ್ಥಿಕ ನೆರವು ನೀಡುತ್ತಿದೆ. ಬಡವರು, ಮಧ್ಯಮ ವರ್ಗದವರು ಹಾಗೂ ರೈತರಿಗೆ ಅನುಕೂಲವಾಗುವಂತೆ ವಿವಿಧ ಯೋಜನೆಗಳನ್ನು ಜಾರಿಗೊಳಿಸಲಾಗಿದೆ ಎಂದು ಸರ್ಕಾರದ ಕ್ರಮಗಳನ್ನು ಸಮರ್ಥಿಸಿಕೊಂಡರು.

ರಾಜ್ಯದಲ್ಲಿ ಬರ ಪರಿಸ್ಥಿತಿಯಿಂದ ಸಂಕಷ್ಟಕ್ಕೆ ಸಿಲುಕಿರುವ ರೈತರ ನೆರವಿಗೆ ಸರ್ಕಾರ ಮುಂದಾಗಿದೆ ಎಂದು ತಿಳಿಸಿದ ಅವರು, ರೈತರಿಗೆ ತಲಾ 5 ಸಾವಿರ ರೂ. ಬರ ಪರಿಹಾರ ನೀಡಲು ನಿರ್ಧರಿಸಲಾಗಿದೆ ಎಂದರು. ಬರದಿಂದಾಗಿ ಕೃಷಿ ಚಟುವಟಿಕೆಗಳು ಕುಂಠಿತಗೊಂಡಿದ್ದು, ರೈತರು ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ರಾಜ್ಯ ಸರ್ಕಾರ ರೈತರ ನೆರವಿಗೆ ನಿಲ್ಲುತ್ತಿದೆ. ಆದರೆ ಬರ ಪರಿಹಾರಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಒಂದು ರೂಪಾಯಿ ಕೂಡ ಬಂದಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ರೈತರ ಸಮಸ್ಯೆಗಳ ಕುರಿತು ಕೇಂದ್ರ ಸರ್ಕಾರ ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಒತ್ತಾಯಿಸಿದರು.

ಕಬ್ಬು ಬೆಳೆಗಾರರ ಸಮಸ್ಯೆಯನ್ನೂ ಪ್ರಸ್ತಾಪಿಸಿದ ಡಿ.ಕೆ. ಶಿವಕುಮಾರ್, ಕಳೆದ ಹತ್ತು ವರ್ಷಗಳಿಂದ ಕಬ್ಬಿಗೆ ಸೂಕ್ತ ಬೆಂಬಲ ಬೆಲೆ ನಿಗದಿಪಡಿಸುವ ವಿಚಾರದಲ್ಲಿ ಕೇಂದ್ರ ಸರ್ಕಾರ ನಿರೀಕ್ಷಿತ ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿದರು. ಕಬ್ಬು ಬೆಳೆಗಾರರು ಉತ್ಪಾದನಾ ವೆಚ್ಚ, ಕಾರ್ಮಿಕರ ವೇತನ, ಸಾಗಣೆ ವೆಚ್ಚ ಸೇರಿದಂತೆ ಹಲವು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ರೈತರ ಆದಾಯ ಹೆಚ್ಚಿಸುವುದಾಗಿ ಹೇಳುವ ಕೇಂದ್ರ ಸರ್ಕಾರ, ರೈತರ ಬೆಳೆಗಳಿಗೆ ನ್ಯಾಯಯುತ ಬೆಲೆ ದೊರಕಿಸುವ ನಿಟ್ಟಿನಲ್ಲಿ ಪರಿಣಾಮಕಾರಿ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಇನ್ನೊಂದೆಡೆ, ಎಥೆನಾಲ್ ಮಿಶ್ರಣದ ಕುರಿತು ರಾಜ್ಯ ಸರ್ಕಾರ ಮಾಡಿರುವ ಆರೋಪಗಳನ್ನು ತೈಲ ಕಂಪನಿಗಳು ತಳ್ಳಿಹಾಕಿವೆ. ಇಂಡಿಯನ್ ಆಯಿಲ್ ಕಾರ್ಪೊರೇಷನ್ ಲಿಮಿಟೆಡ್, ಭಾರತ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್ ಹಾಗೂ ಹಿಂದೂಸ್ತಾನ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್ ಜಂಟಿ ಹೇಳಿಕೆ ಬಿಡುಗಡೆ ಮಾಡಿವೆ. ಕರ್ನಾಟಕ ಸೇರಿದಂತೆ ದೇಶಾದ್ಯಂತ ತಾವು ಪೂರೈಸುತ್ತಿರುವ ಪೆಟ್ರೋಲ್ ಬ್ಯೂರೋ ಆಫ್ ಇಂಡಿಯನ್ ಸ್ಟ್ಯಾಂಡರ್ಡ್ಸ್ ನಿಗದಿಪಡಿಸಿರುವ ಇ20 ಇಂಧನದ ಮಾನದಂಡಗಳಿಗೆ ಅನುಗುಣವಾಗಿದೆ ಎಂದು ಕಂಪನಿಗಳು ಸ್ಪಷ್ಟಪಡಿಸಿವೆ.

ಇಂಧನದಲ್ಲಿ ಎಥೆನಾಲ್ ಮಿಶ್ರಣಕ್ಕೆ ಸಂಬಂಧಿಸಿದಂತೆ ನಿಗದಿತ ಗುಣಮಟ್ಟದ ಮಾನದಂಡಗಳನ್ನು ಪಾಲಿಸಲಾಗುತ್ತಿದೆ. ಕಂಪನಿಗಳಿಂದ ಪೂರೈಕೆಯಾಗುವ ಪೆಟ್ರೋಲ್ ಗುಣಮಟ್ಟದ ಬಗ್ಗೆ ಯಾವುದೇ ಅನುಮಾನ ಬೇಡ ಎಂಬುದು ತೈಲ ಕಂಪನಿಗಳ ಹೇಳಿಕೆಯ ಸಾರವಾಗಿದೆ. ಹೀಗಾಗಿ ರಾಜ್ಯ ಸರ್ಕಾರದ ಆರೋಪ ಮತ್ತು ತೈಲ ಕಂಪನಿಗಳ ಸ್ಪಷ್ಟನೆ ನಡುವೆ ಎಥೆನಾಲ್ ಮಿಶ್ರಣದ ವಿಚಾರ ಮತ್ತಷ್ಟು ಮಹತ್ವ ಪಡೆದುಕೊಂಡಿದೆ.

ಪೆಟ್ರೋಲ್‌ನಲ್ಲಿ ಎಥೆನಾಲ್ ಮಿಶ್ರಣದ ಪ್ರಮಾಣ, ಅದರ ಗುಣಮಟ್ಟ ಹಾಗೂ ವಾಹನಗಳ ಮೇಲೆ ಉಂಟಾಗಬಹುದಾದ ಪರಿಣಾಮಗಳ ಕುರಿತು ವಾಹನ ಸವಾರರಲ್ಲಿ ಆತಂಕ ಮೂಡಿದೆ. ವಿಶೇಷವಾಗಿ ವಾಹನಗಳ ಇಂಜಿನ್ ಸಮಸ್ಯೆ, ಮೈಲೇಜ್ ಇಳಿಕೆ ಹಾಗೂ ನಿರ್ವಹಣಾ ವೆಚ್ಚ ಹೆಚ್ಚಳದ ಬಗ್ಗೆ ಚರ್ಚೆಗಳು ನಡೆಯುತ್ತಿವೆ. ಆದರೆ ಇಂತಹ ಸಮಸ್ಯೆಗಳಿಗೆ ಎಥೆನಾಲ್ ಮಿಶ್ರಣವೇ ನೇರ ಕಾರಣ ಎಂಬುದನ್ನು ಅಧಿಕೃತ ತಾಂತ್ರಿಕ ಪರೀಕ್ಷೆಗಳ ಮೂಲಕ ದೃಢಪಡಿಸಬೇಕಿದೆ. ಸರ್ಕಾರ ನಡೆಸಿರುವ 67 ಸ್ಥಳಗಳ ಪರಿಶೀಲನೆಯ ವರದಿ ಹಾಗೂ ತೈಲ ಕಂಪನಿಗಳ ಸ್ಪಷ್ಟನೆಯ ನಡುವಿನ ವ್ಯತ್ಯಾಸಗಳ ಬಗ್ಗೆ ಹೆಚ್ಚಿನ ಮಾಹಿತಿ ಹೊರಬರಬೇಕಿದೆ.

ಚಿರಿಬಿಯಲ್ಲಿ ಪ್ರಜಾ ಸೇವಾ ಆಂದೋಲನ ಕಾರ್ಯಕ್ರಮ

ಈ ದಿನ ಚಿರಿಬಿಯಲ್ಲಿ 30 ಅರ್ಜಿಗಳ ಸ್ವೀಕಾರ; ಸಾರ್ವಜನಿಕ ಸಮಸ್ಯೆಗಳಿಗೆ ಸ್ಥಳದಲ್ಲೇ ಸ್ಪಂದಿಸಲು ಅಧಿಕಾರಿಗಳ ಭರವಸೆ

1ನೇ ಪುಟದಿಂದ..

ಮೂಲಕ ಆಡಳಿತವನ್ನು ಜನರ ಮನೆಬಾಗಿಲಿಗೆ ತಲುಪಿಸುವ ಕಾರ್ಯ ಮಾಡಲಾಗುತ್ತಿದೆ ಎಂದು ಎಂ. ಪ್ರತಿಭಾ ತಿಳಿಸಿದರು.

ಸಾರ್ವಜನಿಕರು ತಮ್ಮ ಸಮಸ್ಯೆಗಳನ್ನು ಮುಕ್ತವಾಗಿ ಅಧಿಕಾರಿಗಳ ಮುಂದೆ ಮಂಡಿಸಬೇಕು. ಅರ್ಜಿಗಳನ್ನು ಸಂಬಂಧಪಟ್ಟ ಇಲಾಖೆಗಳ ಮೂಲಕ ಪರಿಶೀಲಿಸಿ, ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಸರ್ಕಾರದ ವಿವಿಧ ಯೋಜನೆಗಳು ಮತ್ತು ಸೌಲಭ್ಯಗಳು ಅರ್ಹ ಫಲಾನುಭವಿಗಳಿಗೆ ತಲುಪುವಂತೆ ಇಲಾಖಾಧಿಕಾರಿಗಳು ಕಾರ್ಯನಿರ್ವಹಿಸಬೇಕು ಎಂದು ಅವರು ಸೂಚಿಸಿದರು.

ವಿವಿಧ ಮೂಲಸೌಕರ್ಯಗಳಿಗಾಗಿ ಮನವಿ :

ಚಿರಿಬಿ ಗ್ರಾಮದಲ್ಲಿ ನಡೆದ ಪ್ರಜಾ ಸೇವಾ ಆಂದೋಲನದಲ್ಲಿ ಗ್ರಾಮಸ್ಥರು ತಮ್ಮ ಗ್ರಾಮದ ಹಲವು ಮೂಲಭೂತ ಸಮಸ್ಯೆಗಳನ್ನು ಅಧಿಕಾರಿಗಳ ಮುಂದಿಟ್ಟರು. ಗ್ರಾಮದಲ್ಲಿ ಹೈಸ್ಕೂಲ್, ಬಸ್ ನಿಲ್ದಾಣ, ಗ್ರಂಥಾಲಯ ಹಾಗೂ ಗ್ರಾಮ ಪಂಚಾಯಿತಿ ಕಟ್ಟಡ ನಿರ್ಮಾಣ, ರೈತರಿಗೆ ನಿರಂತರ ವಿದ್ಯುತ್ ಸರಬರಾಜು, ಅಂಗವಿಕಲರಿಗೆ ತ್ರಿಚಕ್ರ ವಾಹನ ಒದಗಿಸುವುದು, ಸ್ಥಗಿತಗೊಂಡಿರುವ ವಿವಿಧ ಪಿಂಚಣಿಗಳನ್ನು ಮುಂದುವರಿಸುವುದು ಸೇರಿದಂತೆ ಹಲವು ಬೇಡಿಕೆಗಳನ್ನು ಮುಂದಿಟ್ಟುಕೊಂಡು ಅರ್ಜಿಗಳನ್ನು ಸಲ್ಲಿಸಿದರು.

ಇದರ ಜೊತೆಗೆ ವಾಸದ ಮನೆ, ನಿವೇಶನ ಹಾಗೂ ಪಟ್ಟಾ ನೀಡುವಂತೆ ಗ್ರಾಮಸ್ಥರು ಮನವಿ ಸಲ್ಲಿಸಿದರು. ಸಾರ್ವಜನಿಕರ ಸಮಸ್ಯೆಗಳನ್ನು ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಪರಿಶೀಲಿಸಿ, ಅರ್ಹತೆ ಹಾಗೂ ನಿಯಮಾನುಸಾರ ಕ್ರಮ ಕೈಗೊಳ್ಳುವ ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಒಟ್ಟು 30 ಅರ್ಜಿಗಳು ಸ್ವೀಕೃತವಾದವು. ಆರ್‌ಡಿಪಿಆರ್ ಇಲಾಖೆಗೆ ಸಂಬಂಧಿಸಿದಂತೆ 14 ಅರ್ಜಿಗಳು, ಕಂದಾಯ ಇಲಾಖೆಗೆ 2, ಶಿಕ್ಷಣ ಇಲಾಖೆಗೆ 2 ಅರ್ಜಿಗಳು ಸ್ವೀಕೃತವಾದವು. ಇದಲ್ಲದೆ ಸಣ್ಣ ನೀರಾವರಿ, ಆಹಾರ, ಆರೋಗ್ಯ, ಕೃಷಿ, ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ, ಕಾರ್ಮಿಕ ಹಾಗೂ ಪಶುಸಂಗೋಪನೆ ಇಲಾಖೆಗೆ ಸಂಬಂಧಿಸಿದಂತೆ ತಲಾ ಒಂದು ಅರ್ಜಿ ಸೇರಿದಂತೆ ಒಟ್ಟು 30 ಅರ್ಜಿಗಳನ್ನು ಸ್ವೀಕರಿಸಲಾಯಿತು.

ಜನರ ಸಮಸ್ಯೆಗಳಿಗೆ ಸ್ಪಂದಿಸುವ ಆಡಳಿತ :

ಪ್ರಜಾ ಸೇವಾ ಆಂದೋಲನದ ಮೂಲಕ ವಿವಿಧ ಇಲಾಖೆಗಳ ಅಧಿಕಾರಿಗಳು ಒಂದೇ ಸ್ಥಳದಲ್ಲಿ ಉಪಸ್ಥಿತರಿದ್ದರಿಂದ ಗ್ರಾಮಸ್ಥರಿಗೆ ತಮ್ಮ ಸಮಸ್ಯೆಗಳನ್ನು ನೇರವಾಗಿ ಅಧಿಕಾರಿಗಳ ಗಮನಕ್ಕೆ ತರಲು ಅನುಕೂಲವಾಯಿತು. ವಿವಿಧ ಇಲಾಖೆಗಳ ವ್ಯಾಪ್ತಿಗೆ ಬರುವ ಸಮಸ್ಯೆಗಳನ್ನು ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಿ, ಅರ್ಜಿಗಳನ್ನು ಸ್ವೀಕರಿಸುವ ಮೂಲಕ ಮುಂದಿನ ಕ್ರಮಕ್ಕೆ ಅವಕಾಶ ಕಲ್ಪಿಸಲಾಯಿತು.

ಗ್ರಾಮೀಣ ಭಾಗದ ಜನರಿಗೆ ಸರ್ಕಾರದ ವಿವಿಧ ಇಲಾಖೆಗಳ ಸೇವೆ ಹಾಗೂ ಸೌಲಭ್ಯಗಳ ಕುರಿತು ಮಾಹಿತಿ ದೊರೆಯುವುದರ ಜೊತೆಗೆ, ತಮ್ಮ ಸಮಸ್ಯೆಗಳಿಗೆ ಯಾವ ಇಲಾಖೆಯನ್ನು ಸಂಪರ್ಕಿಸಬೇಕು ಎಂಬುದರ ಬಗ್ಗೆಯೂ ಅರಿವು ಮೂಡಿತು. ಅಧಿಕಾರಿಗಳು ಸಾರ್ವಜನಿಕರ ಅಹವಾಲುಗಳನ್ನು ತಾಳ್ಮೆಯಿಂದ ಆಲಿಸಿ, ಸಾಧ್ಯವಾದಷ್ಟು ಶೀಘ್ರವಾಗಿ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಚಿರಿಬಿ ಗ್ರಾಮಸ್ಥರ ಸಮಸ್ಯೆಗಳನ್ನು ಸ್ಥಳದಲ್ಲಿಯೇ ಆಲಿಸಿ, ಸಂಬಂಧಪಟ್ಟ ಇಲಾಖೆಗಳ ಮೂಲಕ ಪರಿಹಾರ ಕಂಡುಕೊಳ್ಳಲು ಅಧಿಕಾರಿಗಳು ಮುಂದಾಗಿರುವುದರಿಂದ ಪ್ರಜಾ ಸೇವಾ ಆಂದೋಲನವು ಸಾರ್ವಜನಿಕರಿಗೆ ಅನುಕೂಲಕರ ವೇದಿಕೆಯಾಗಿ ಪರಿಣಮಿಸಿತು.

ಈ ಕಾರ್ಯಕ್ರಮದಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕರಾದ ರವಿಕುಮಾರ್ ಮತ್ತು ನಾಗೇಶ್ ಅವರು ಸ್ವಾಗತಿಸಿ, ಕಾರ್ಯಕ್ರಮವನ್ನು ನಿರ್ವಹಿಸಿದರು.

ಈ ಕಾರ್ಯಕ್ರಮದಲ್ಲಿ ನರೇಗಾ ಎ.ಡಿ. ಹೆಚ್. ವಿಜಯಕುಮಾರ್, ಕೃಷಿ ಇಲಾಖೆ ಎಡಿ ಮಹಾಂತೇಶ್, ಮುಖ್ಯ ಪಶುವೈದ್ಯಾಧಿಕಾರಿ ಚಂದ್ರ ನಾಯ್ಕ, ಜೆಸ್ಕಾಂ ಎಇಇ ನಾಗರಾಜ, ಕೃಷಿ ಅಧಿಕಾರಿ ಶ್ಯಾಮಸುಂದರ್, ನಿರ್ಮಿತಿ ಕೇಂದ್ರದ ಪ್ರಾಜೆಕ್ಟ್ ಇಂಜಿನಿಯರ್ ಮಂಜುನಾಥ ಡಿ.ಎಸ್., ದಂತ ವೈದ್ಯಾಧಿಕಾರಿ ಲಕ್ಷ್ಮಿ, ಇಸಿಒ ರವಿಕುಮಾರ್, ಕಂದಾಯ ನಿರೀಕ್ಷಕ ಡಿ. ಶಿವಕುಮಾರ್, ಪಿಡಿಒ ಹುಲಿಗೆಮ್ಮ, ಗ್ರಾಮ ಆಡಳಿತ ಅಧಿಕಾರಿ ಗುಡ್ಡದ ಕಾವೇರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ಸಮಯಕ್ಕೆ ಬಾರದ ಮುತ್ಕೂರು ಗ್ರಾಪಂ ಪಿಡಿಒ

1ನೇ ಪುಟದಿಂದ..

ಅವಲಂಬಿಸಿದ್ದಾರೆ. ಇಂತಹ ಸಂದರ್ಭದಲ್ಲಿ ಜವಾಬ್ದಾರಿಯುತ ಅಧಿಕಾರಿಗಳು ಸಮಯಕ್ಕೆ ಸರಿಯಾಗಿ ಕಚೇರಿಯಲ್ಲಿ ಲಭ್ಯವಿರದಿದ್ದರೆ, ಸಾರ್ವಜನಿಕರು ತಮ್ಮ ಸಮಸ್ಯೆಗಳನ್ನು ಪರಿಹರಿಸಿಕೊಳ್ಳಲು ಯಾರನ್ನು ಸಂಪರ್ಕಿಸಬೇಕು ಎಂಬ ಪ್ರಶ್ನೆ ಎದುರಾಗುತ್ತದೆ ಎಂದು ಗ್ರಾಮಸ್ಥರು ಪ್ರಶ್ನಿಸಿದ್ದಾರೆ.

ವಿಶೇಷವಾಗಿ ರೈತರು ಹಾಗೂ ಕೂಲಿ ಕಾರ್ಮಿಕರಿಗೆ ಸಮಯ ಬಹಳ ಮುಖ್ಯವಾಗಿದೆ. ಬೆಳಗ್ಗೆ ಹೊಲದ ಕೆಲಸ, ಕೂಲಿ ಕೆಲಸ ಸೇರಿದಂತೆ ತಮ್ಮ ದಿನನಿತ್ಯದ ದುಡಿಮೆಯನ್ನು ಬಿಟ್ಟು ಪಂಚಾಯಿತಿ ಕಚೇರಿಗೆ ಬರುವವರು ಗಂಟೆಗಟ್ಟಲೆ ಅಧಿಕಾರಿಗಾಗಿ ಕಾಯಬೇಕಾದರೆ, ಅವರ ದಿನದ ದುಡಿಮೆಗೆ ತೊಂದರೆಯಾಗುತ್ತದೆ. ಕೆಲವರು ಕೆಲಸ ಮುಗಿಸಿಕೊಳ್ಳಲು ಪಂಚಾಯಿತಿಗೆ ಬಂದರೂ ಅಧಿಕಾರಿಗಳು ಲಭ್ಯವಿಲ್ಲದ ಕಾರಣ ಮತ್ತೆ ಮನೆಗೆ ತೆರಳಿ ಮತ್ತೊಂದು ದಿನ ಬರುವ ಪರಿಸ್ಥಿತಿ ಎದುರಾಗುತ್ತಿದೆ ಎಂದು ಸಾರ್ವಜನಿಕರು ತಿಳಿಸಿದ್ದಾರೆ.

"ನಾವು ನಮ್ಮ ಮನೆ ಮತ್ತು ಹೊಲದ ಕೆಲಸಗಳನ್ನು ಬಿಟ್ಟು ಪಂಚಾಯಿತಿಗೆ ಬರುತ್ತೇವೆ. ಬೆಳಗ್ಗೆಯೇ ಬಂದು ಕಾಯುತ್ತಾ ಕುಳಿತರೆ ನಮ್ಮ ದಿನದ ಕೆಲಸ ನಷ್ಟವಾಗುತ್ತದೆ. ಅಧಿಕಾರಿಗಳು ಸಮಯಕ್ಕೆ ಸರಿಯಾಗಿ ಕಚೇರಿಯಲ್ಲಿ ಇದ್ದರೆ ನಮ್ಮ ಕೆಲಸಗಳನ್ನು ಮುಗಿಸಿಕೊಂಡು ಮತ್ತೆ ನಮ್ಮ ದುಡಿಮೆಗೆ ಹೋಗಬಹುದು. ಆದರೆ ಅಧಿಕಾರಿಗಾಗಿ ಕಾಯುವುದೇ ನಮ್ಮ ಕೆಲಸವಾಗಬಾರದು" ಎಂದು ಗ್ರಾಮಸ್ಥರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಸರ್ಕಾರಿ ಕಚೇರಿಗಳಲ್ಲಿ ಸಮಯ ಪಾಲನೆ ಕೇವಲ ಅಧಿಕಾರಿಗಳ ಜವಾಬ್ದಾರಿಯಲ್ಲ, ಅದು ಸಾರ್ವಜನಿಕರ ಮೇಲಿರುವ ಆಡಳಿತಾತ್ಮಕ ಹೊಣೆಗಾರಿಕೆಯೂ ಆಗಿದೆ. ಗ್ರಾಮ ಪಂಚಾಯಿತಿಯಂತಹ ಸ್ಥಳೀಯ ಆಡಳಿತ ವ್ಯವಸ್ಥೆಯಲ್ಲಿ ಪಿಡಿಒ ಪ್ರಮುಖ ಜವಾಬ್ದಾರಿ ಹೊಂದಿರುತ್ತಾರೆ. ಗ್ರಾಮಸ್ಥರ ಸಮಸ್ಯೆಗಳನ್ನು ಆಲಿಸಿ, ಸರ್ಕಾರದ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿ, ಪಂಚಾಯಿತಿ ಆಡಳಿತ ಸುಗಮವಾಗಿ ನಡೆಯುವಂತೆ ನೋಡಿಕೊಳ್ಳುವುದು ಅವರ ಕರ್ತವ್ಯವಾಗಿದೆ. ಹೀಗಿರುವಾಗ ಕಚೇರಿಯಲ್ಲೇ ಅಧಿಕಾರಿಯ ಲಭ್ಯತೆ ಕುರಿತು ಸಾರ್ವಜನಿಕರಿಂದ ದೂರುಗಳು ಕೇಳಿಬರುವುದು ಗಂಭೀರವಾಗಿ ಪರಿಗಣಿಸಬೇಕಾದ ವಿಷಯವಾಗಿದೆ.

ಸಾರ್ವಜನಿಕರು ಅಧಿಕಾರಿಗಳ ವಿರುದ್ಧ ವೈಯಕ್ತಿಕ ದ್ವೇಷದಿಂದ ಪ್ರಶ್ನೆ ಮಾಡುತ್ತಿಲ್ಲ. ತಮ್ಮ ಸಮಯಕ್ಕೆ ಗೌರವ ದೊರೆಯಬೇಕು, ಸರ್ಕಾರಿ ಕಚೇರಿಯಲ್ಲಿ ತಮ್ಮ ಕೆಲಸಗಳು ಸಮಯಕ್ಕೆ ಸರಿಯಾಗಿ ಆಗಬೇಕು ಎಂಬ ನಿರೀಕ್ಷೆಯಲ್ಲಿದ್ದಾರೆ. ಜನರು ತಮ್ಮ ದುಡಿಮೆಯನ್ನು ಬಿಟ್ಟು ಕಚೇರಿಗೆ ಬಂದು ಕಾಯುವಂತಾಗಬಾರದು. ಪಂಚಾಯಿತಿ ಕಚೇರಿಗೆ ಬರುವ ಪ್ರತಿಯೊಬ್ಬರಿಗೂ ಅಧಿಕಾರಿಗಳು ನಿಗದಿತ ಸಮಯದಲ್ಲಿ ಲಭ್ಯವಿದ್ದು, ಅವರ ಸಮಸ್ಯೆಗಳನ್ನು ಆಲಿಸಿ ಸೂಕ್ತ ಮಾರ್ಗದರ್ಶನ ನೀಡಬೇಕು ಎಂಬುದು ಗ್ರಾಮಸ್ಥರ ಒತ್ತಾಯವಾಗಿದೆ.

ಈ ಹಿನ್ನೆಲೆಯಲ್ಲಿ ಸಂಬಂಧಪಟ್ಟ ತಾಲೂಕು ಮಟ್ಟದ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಮುತ್ತುಗೂರು ಗ್ರಾಮ ಪಂಚಾಯಿತಿಯ ಕಚೇರಿ ಕಾರ್ಯವೈಖರಿ ಮತ್ತು ಪಿಡಿಒ ಅವರ ಹಾಜರಾತಿ ಕುರಿತು ಪರಿಶೀಲನೆ ನಡೆಸಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ. ಆರೋಪಗಳಲ್ಲಿ ಸತ್ಯಾಸತ್ಯತೆ ಏನು ಎಂಬುದನ್ನು ಪರಿಶೀಲಿಸಿ, ತಪ್ಪು ಕಂಡುಬಂದಲ್ಲಿ ನಿಯಮಾನುಸಾರ ಕ್ರಮ ಕೈಗೊಳ್ಳಬೇಕು. ಜೊತೆಗೆ ಗ್ರಾಮಸ್ಥರು ಅನಗತ್ಯವಾಗಿ ಕಚೇರಿಗೆ ಬಂದು ಕಾಯುವ ಪರಿಸ್ಥಿತ

ಕುಣಿಗಲ್ ತಾಲ್ಲೂಕಿನಲ್ಲಿ 40 ಸಾವಿರ ಪೌತಿ ಖಾತೆ ಪೂರ್ಣ ಕಂದಾಯ ಇಲಾಖೆ ವಿರುದ್ಧ ಶಾಸಕರು ಅಸಮಧಾನ



ಕುಣಿಗಲ್: ತಾಲೂಕಿನಲ್ಲಿ ಈವರೆಗೂ 40 ಸಾವಿಕ್ಕೂ ಅಧಿಕ ಪೌತಿ ಖಾತೆ ಮಾಡಲಾಗಿದೆ, ಇನ್ನೂ 22 ಸಾವಿರ ಪೌತಿ ಖಾತೆ ಬಾಕಿ ಇದ್ದು, ಈ ಪೌತಿ ಖಾತೆಗಳನ್ನು ಮೂರು ತಿಂಗಳ ಒಳಗೆ ಮುಗಿಸುವಂತೆ ಪ್ರಸಂಗ ಪ್ರಜಾ ಸೇವಾ ಅಭಿಯಾನದಲ್ಲಿ ಕಂದಾಯ ಇಲಾಖೆ ಅಧಿಕಾರಿಗಳಿಗೆ ಶಾಸಕ ಡಾ.ಎಚ್ .ಡಿ.ರಂಗನಾಥ್ ಸೂಚನೆ ನೀಡಿದರು.

ಅವರು ನ.07ರಂದು ಅಮೃತ್ತೂರಿನಲ್ಲಿ ಪ್ರಜಾ ಸೇವಾ ಅಭಿಯಾನ, ಜನ ಸಭೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಪಿತ್ರಾರ್ಜಿತ ಸ್ವತ್ತು ಎರಡು, ಮೂರು ತಲೆ ಮಾರುಗಳಿಂದ ವಾರಸುದಾರರಿಗೆ ಆಸ್ತಿ ದಾಖಲೆ ವರ್ಗಾವಣೆಯಾಗದ ಕಾರಣ, ವಾರಸುದಾರರು ಸರ್ಕಾರಿ ಸೌಲಭ್ಯ ಮತ್ತು ಬ್ಯಾಂಕ್ಗಳಿಂದ ಸಾಲ ಸೌಲಭ್ಯ ಪಡೆಯಲು ತೊಂದರೆ ಉಂಟಾಗಿದೆ. ಇದನ್ನು ಗಮನಿಸಿದ ರಾಜ್ಯ ಕಾಂಗ್ರೆಸ್, ಪೌತಿ ಖಾತೆ ಅಂದೋಲನ ಮೂಲಕ ಸುಲಭವಾಗಿ ವಾರಸುದಾರರಿಗೆ ಖಾತೆ ಮಾಡಿಕೊಡುವ ವಿನೂತನ ಕಾರ್ಯಕ್ರಮವನ್ನು ಜಾರಿಗೆ ತಂದಿದೆ ಎಂದರು. ಈ ಹಿನ್ನೆಲೆಯಲ್ಲಿ ತಾಲೂಕಿನಲ್ಲಿ ಮೂಲ ಮಾಲೀಕರು ಮರಣ ಹೊಂದಿದ ಬಳಿಕ ತಾಲೂಕಿನ 40 ಸಾವಿರ ವಾರಸುದಾರರ ಹೆಸರು ಪಹಣಿಯಲ್ಲಿ ಬರುವಂತೆ ಮಾಡಿ ಕಾನೂನು ಬದ್ದವಾಗಿ ಮಾಡಿಕೊಡಲಾಗಿದೆ. ಪೌತಿ ಖಾತೆ ಆಗದೆ ಇರುವವರು ಅಗತ್ಯ ದಾಖಲೆಗಳನ್ನು ಅಧಿಕಾರಿಗಳಿಗೆ ನೀಡಿ ತಮ್ಮ ಹೆಸರನ್ನು ನೋಂದಾಯಿಸಿಕೊಂಡು ಪೌತಿ ಖಾತೆ

ಮಾಡಿಸಿಕೊಳ್ಳಬೇಕು. ಎಂದು ಸೂಚಿಸಿದರು.

ಕಂದಾಯ ಇಲಾಖೆ ಗೊಂದಲದ ಗೂಡಾಗಿದೆ: ಕಂದಾಯ ಇಲಾಖೆ ಗೊಂದಲದ ಗೂಡಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ ಶಾಸಕ ಡಾ.ಎಚ್.ಡಿ.ರಂಗನಾಥ್, ಅಧಿಕಾರಿಗಳು ಸರಿಯಾಗಿ ಪ್ರಚಾರ ಮಾಡದ ಕಾರಣ ಪ್ರಜಾ ಸೇವಾ ಸಭೆಗೆ ನಿರೀಕ್ಷಿತ ಪ್ರಮಾಣದಲ್ಲಿ ಜನರು ಬಂದಿಲ್ಲ. ಸರಿಯಾದ ಮೈಕ್ ಅಳವಡಿಸಿಲ್ಲ, ಇದು ಹೀಗೆಯೆ ಮುಂದುವರೆದರೆ ಮುಂದಿನ ಪ್ರಜಾ ಸೇವಾ ಸಭೆಗೆ ನಾನು ಬರುವುದಿಲ್ಲ ಎಂದು ಅವರು ಅಧಿಕಾರಿಗಳಿಗೆ ಎಚ್ಚರಿಸಿದರು.ಕಾವಲುಗಾರನಾಗಿ ಮನೆ ಕಾಯುವೆ: ಕ್ಷೇತ್ರದ ಅಭಿವೃದ್ಧಿಗಾಗಿ ಟೊಂಕ ಕಟ್ಟಿಕೊಂಡಿ ಕೆಲಸ ಮಾಡುತ್ತಿರುವೆ ಎಂದು ಹೇಳಿದರು.

ರಾಜಕಾಲುವೆ ಒತ್ತುವರಿ: ನಾನು ಗ್ರಾಮಗಳಿಗೆ ಭೇಟಿ ನೀಡುವ ವೇಳೆಯಲ್ಲಿ ಕೆಲ ವ್ಯಕ್ತಿಗಳು ಶೌಚಾಲಯದ ಕಲುಷಿತ ನೀರು, ರಸ್ತೆಗೆ ಬಿಡುತ್ತಿರುವುದು ಗಮನಿಸಿದ್ದೇನೆ. ಹಲವೆಡೆ ರಾಜಕಾಲುವೆ, ನಕಾಶೆ ರಸ್ತೆಗಳನ್ನು ಒತ್ತುವರಿ ಮಾಡಿಕೊಂಡು ಅಕ್ರಮವಾಗಿ ಮನೆ ಕಟ್ಟಿಕೊಂಡಿರುವುದನ್ನು ನೋಡಿದ್ದೇನೆ. ಜನರು ಹೀಗೆ ಮಾಡಿದರೆ ನಿಮ್ಮಗಳಿಗೆ ತೊಂದರೆಯಾಗಲಿದೆಯೆ ಹೊರತು ನನಗಾಗಲಿ, ಅಧಿಕಾರಿಗಳಿಗಾಗಲಿ ತೊಂದರೆ ಆಗುವುದಿಲ್ಲ. ಊರಿನಲ್ಲಿ ವಾಸ ಮಾಡುವುದು ನೀವು, ಹಾಗಾಗಿ ಗ್ರಾಮಗಳನ್ನು ಸ್ವಚ್ಛವಾಗಿ ಇಟ್ಟುಕೊಳ್ಳಿ ಎಂದು ಜನರಲ್ಲಿ ಶಾಸಕರು ಮನವಿ ಮಾಡಿದರು.

ಸಭೆಯಲ್ಲಿ ತಹಸೀಲ್ದಾರ್ ಎನ್.ಆರ್. ಕರಿಯಾನಾಯ್ಕ, ತಾ.ಪಂ ಇಒ ಎಚ್.ವಿ.ವಸಂತ್ ಕುಮಾರ್, ಪುರಸಭಾ ಮುಖ್ಯಾಧಿಕಾರಿ ರವಿಕುಮಾರ್, ಟಿಎಚ್ಓ ಡಾ.ಮರಿಯಪ್ಪ, ಪಿಎಸ್ಐ ಪ್ರಶಾಂತ್, ಗ್ರಾ.ಪಂ ಮಾಜಿ ಉಪಾಧ್ಯಕ್ಷ ಕೆ. ಶ್ರೀನಿವಾಸ್ ಮತ್ತಿತರರು ಇದ್ದರು.

ಸರ್ಕಾರದ ವಿವಿಧ ಯೋಜನೆಗಳ ಕುರಿತು ಬನ್ನಿಗೋಳದಲ್ಲಿ ಬೀದಿ ನಾಟಕ



ಹಗರಿಬೊಮ್ಮನಹಳ್ಳಿ: ಹಗರಿಬೊಮ್ಮನಹಳ್ಳಿ ತಾಲೂಕು ವ್ಯಾಪ್ತಿಯ ಬನ್ನಿಗೋಳ ಗ್ರಾಮ ಪಂಚಾಯಿತಿ ಆವರಣದಲ್ಲಿ ವಾರ್ತಾ ಇಲಾಖೆ ಹಾಗೂ ಸಾರ್ವಜನಿಕರ ಸಂಪರ್ಕ ಇಲಾಖೆ, ವಿಜಯನಗರ ಜಿಲ್ಲೆ ಇವರ ಸಂಯುಕ್ತಾಶ್ರಯದಲ್ಲಿ ಸರ್ಕಾರದ ವಿವಿಧ ಜನಪರ ಯೋಜನೆಗಳ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಬೀದಿ ನಾಟಕ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಹೂವಿನಹಡಗಲಿ ತಾಲೂಕು, ವಿಜಯನಗರ ಜಿಲ್ಲೆಗೆ ಸೇರಿದ ಜನನಿ ಪುಷ್ಪಕಲಾ ಯುವಕ ಸಂಘ (ರಿ.) ಹ್ಯಾರಡ ತಂಡದ ಕಲಾವಿದರು ಬೀದಿ ನಾಟಕದ ಮೂಲಕ ಸರ್ಕಾರ ಜಾರಿಗೊಳಿಸಿರುವ ವಿವಿಧ ಯೋಜನೆಗಳು, ಅವುಗಳ ಪ್ರಯೋಜನ ಹಾಗೂ ಅರ್ಹ ಫಲಾನುಭವಿಗಳು ಯೋಜನೆಗಳನ್ನು ಸದುಪಯೋಗಪಡಿಸಿಕೊಳ್ಳುವ ಕುರಿತು ಸಾರ್ವಜನಿಕರಿಗೆ ಮನವರಿಕೆ ಮಾಡಿಕೊಟ್ಟರು.

ಕಾರ್ಯಕ್ರಮವನ್ನು ಬನ್ನಿಗೋಳ ಗ್ರಾಮ ಪಂಚಾಯಿತಿ ಕಾರ್ಯಾಲಯದ ಅಧಿಕಾರಿಗಳು ಉದ್ಘಾಟಿಸಿ ಮಾತನಾಡಿ, ಸರ್ಕಾರವು ಸಾರ್ವಜನಿಕರ ಕಲ್ಯಾಣಕ್ಕಾಗಿ ಹಲವು ಯೋಜನೆಗಳನ್ನು ಜಾರಿಗೊಳಿಸಿದೆ.

ಗ್ರಾಮೀಣ ಪ್ರದೇಶದ ಜನರು ಈ ಯೋಜನೆಗಳ ಬಗ್ಗೆ ಸಂಪೂರ್ಣ ಮಾಹಿತಿ ಪಡೆದುಕೊಂಡು, ಅರ್ಹತೆ ಹೊಂದಿರುವವರು ಸಂಬಂಧಪಟ್ಟ ಇಲಾಖೆಗಳ ಮೂಲಕ ಯೋಜನೆಗಳ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಸರ್ಕಾರದ ಯೋಜನೆಗಳು ಕೇವಲ ಕಚೇರಿಗಳಲ್ಲಿನ ಮಾಹಿತಿಯಾಗಿ ಉಳಿಯದೆ, ಪ್ರತಿಯೊಬ್ಬ ಅರ್ಹ ಫಲಾನುಭವಿಗೂ ತಲುಪಬೇಕು ಎಂಬ ಉದ್ದೇಶದಿಂದ ಇಂತಹ ಬೀದಿ ನಾಟಕ ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಸರಳವಾದ ನಾಟಕ, ಸಂಭಾಷಣೆ ಹಾಗೂ ಕಲಾ ಪ್ರದರ್ಶನದ ಮೂಲಕ ಜನರಿಗೆ ಮಾಹಿತಿ ತಲುಪಿಸುವ ಪ್ರಯತ್ನ ಶ್ಲಾಘನೀಯವಾಗಿದೆ ಎಂದು ಅಧಿಕಾರಿಗಳು ಹೇಳಿದರು. ಬೀದಿ ನಾಟಕದಲ್ಲಿ ಕಲಾವಿದರು ಸರ್ಕಾರದ ವಿವಿಧ ಜನಪರ ಯೋಜನೆಗಳ ಉದ್ದೇಶ, ಫಲಾನುಭವಿಗಳ ಅರ್ಹತೆ, ಅರ್ಜಿ ಸಲ್ಲಿಸುವ ವಿಧಾನ ಹಾಗೂ ಯೋಜನೆಗಳಿಂದ ದೊರೆಯುವ ಪ್ರಯೋಜನಗಳ ಕುರಿತು ಮನರಂಜನೆಯೊಂದಿಗೆ ಮಾಹಿತಿ ನೀಡಿದರು. ಕಾರ್ಯಕ್ರಮವನ್ನು ಗ್ರಾಮಸ್ಥರು ಆಸಕ್ತಿಯಿಂದ ವೀಕ್ಷಿಸಿ, ಸರ್ಕಾರದ ಯೋಜನೆಗಳ ಕುರಿತು ಮಾಹಿತಿ ಪಡೆದುಕೊಂಡರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಸಿಬ್ಬಂದಿ, ಜನನಿ ಪುಷ್ಪಕಲಾ ಯುವಕ ಸಂಘದ ಕಲಾವಿದರು, ಸಾರ್ವಜನಿಕರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು. ಕಾರ್ಯಕ್ರಮವು ಸಾರ್ವಜನಿಕರಲ್ಲಿ ಸರ್ಕಾರದ ವಿವಿಧ ಯೋಜನೆಗಳ ಬಗ್ಗೆ ಜಾಗೃತಿ ಮೂಡಿಸುವಲ್ಲಿ ಸಹಕಾರಿಯಾಯಿತು.

ಪ್ರಜಾಸೇವಾ ಆಂದೋಲನದಲ್ಲಿ ಮಾನವೀಯತೆ ಮೆರೆದ ಶಾಸಕ ಡಾ. ಶ್ರೀನಿವಾಸ್



ಕೂಡ್ಲಿಗಿ: ಸರ್ಕಾರಿ ಕಚೇರಿಯಲ್ಲೋ, ವಿಧಾನಸೌಧದಲ್ಲೋ ಅಲ್ಲ. ಜನರ ಮಧ್ಯೆ, ಹಳ್ಳಿಯಲ್ಲೇ ಕುಳಿತು ಜನರ ಕಷ್ಟ ಕೇಳುವ ಪ್ರಜಾಸೇವಾ ಆಂದೋಲನದಲ್ಲಿ ಶನಿವಾರ ಮಾನವೀಯತೆಯೊಂದು ಮೆರೆದಾಡಿತು.

ಚಂದ್ರಶೇಖರಪುರ ಗ್ರಾಮದಲ್ಲಿ ಗುಡೇಕೋಟೆ ಹೋಬಳಿ ಮಟ್ಟದ ಪ್ರಜಾಸೇವಾ ಆಂದೋಲನ ನಡೆಯುತ್ತಿತ್ತು. ಅಲ್ಲಿಗೆ ಬಂದಿದ್ದು ಕೇವಲ ಅರ್ಜಿ ಕೊಡಲು ಬಂದ ಜನರಲ್ಲ. ಕುಟುಂಬದ ಆಧಾರಸ್ತಂಭವನ್ನೇ ಕಳೆದುಕೊಂಡು ಕಣ್ಣೀರಿನಲ್ಲಿ ಕೈತೊಳೆಯುತ್ತಿದ್ದ ಕುಟುಂಬಗಳು.

ಸರ್ಕಾರಿ ಸೇವೆಯಲ್ಲಿ ಇದ್ದು ಮೃತಪಟ್ಟ ಗ್ರಾಮ ಪಂಚಾಯಿತಿ ನೌಕರರ ಮನೆಗಳಲ್ಲಿ ದೀಪ ಆರಿದಂತಾಗಿತ್ತು. ದುಡಿಯುವ ಕೈ ಇಲ್ಲ, ತುತ್ತಿನ ಚಿಂತೆ. ಅಂತಹ ಸಂಕಷ್ಟದ ಕುಟುಂಬಗಳಿಗೆ ಶಾಸಕ ಡಾ. ಶ್ರೀನಿವಾಸ್ ಎನ್.ಟಿ. ಅವರು ನೀಡಿದ್ದು ಕೇವಲ ಭರವಸೆಯ ಮಾತಲ್ಲ, ಬದುಕಿಗೆ ಆಧಾರವಾಗುವ ಸರ್ಕಾರಿ ಉದ್ಯೋಗದ ನೇಮಕಾತಿ ಆದೇಶ ಪತ್ರ.

ವಿಜಯನಗರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ತಾಲೂಕು ಆಡಳಿತ ಮತ್ತು ತಾಲೂಕು ಪಂಚಾಯಿತಿ ಕೂಡ್ಲಿಗಿ ವತಿಯಿಂದ ನಡೆದ ಈ ಕಾರ್ಯಕ್ರಮದಲ್ಲಿ ಶಾಸಕರು ಸ್ವತಃ ಫಲಾನುಭವಿಗಳ ಕೈಗೆ ಆದೇಶ ಪತ್ರ ನೀಡಿದರು. ಪತ್ರ ಕೈಗೆ ಸಿಗುತ್ತಿದ್ದಂತೆ ಹಲವು ಕುಟುಂಬಗಳ ಕಣ್ಣಲ್ಲಿ ಆನಂದಬಾಷ್ಪ ತುಂಬಿತ್ತು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕರು, ಒಬ್ಬ ವ್ಯಕ್ತಿ ಹೋದರೆ ಆ ಕುಟುಂಬ ಮುಗಿದು ಹೋಯಿತು ಎಂದು ಅರ್ಥವಲ್ಲ. ಸರ್ಕಾರ ಆ ಕುಟುಂಬದ ಜೊತೆ ಇದೆ. ಮೃತ ನೌಕರರ ತ್ಯಾಗವನ್ನು ನಾವು ಮರೆಯುವುದಿಲ್ಲ. ಅವರ ಅವಲಂಬಿತರಿಗೆ ಉದ್ಯೋಗ ಕೊಡಿಸುವುದು ನಮ್ಮ ಕರ್ತವ್ಯ. ಈ ಉದ್ಯೋಗವನ್ನು ಸರಿಯಾಗಿ ಬಳಸಿಕೊಂಡು ಕುಟುಂಬವನ್ನು ಮೇಲೆತ್ತಿ, ಸ್ವಾವಲಂಬಿ ಬದುಕು ಕಟ್ಟಿಕೊಳ್ಳಿ. ನಿಮ್ಮ ಬದುಕು ಹಸನಾಗುವುದೇ ನಮಗೆ ದೊಡ್ಡ ಸಂತೋಷ ಎಂದರು.

ಶಾಸಕರ ನಿರಂತರ ಪ್ರಯತ್ನದಿಂದಲೇ ಬಹುದಿನಗಳಿಂದ ನೆನೆಗುದಿಗೆ ಬಿದ್ದಿದ್ದ ಅನುಕಂಪದ ಆಧಾರದ ನೇಮಕಾತಿ ಪ್ರಕ್ರಿಯೆ ಸಾಕಾರಗೊಂಡಿದೆ ಎಂದು ಅಧಿಕಾರಿಗಳು ತಿಳಿಸಿದರು.

ಆದೇಶ ಪತ್ರ ಪಡೆದ ಫಲಾನುಭವಿಗಳು ಶಾಸಕರಿಗೆ ಕೃತಜ್ಞತೆ ಸಲ್ಲಿಸಿದರು. ನಮ್ಮ ಮನೆಗೆ ಮತ್ತೆ ಬೆಳಕು ಬಂದಿದೆ ಎಂದು ಭಾವುಕರಾಗಿ ಹೇಳಿದರು.

ಈ ಸಂದರ್ಭದಲ್ಲಿ ತಾಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೆ.ನರಸಪ್ಪ, ಬಿಇಒ ಮೈಲೇಶ್ ಬೇವೂರು, ಸಿಡಿಪಿಒ ಅಧಿಕಾರಿ ಮಾಲುಂಬಿ, ಬಿಸಿಎಂ ಕಲ್ಯಾಣ ಅಧಿಕಾರಿ ಶ್ಯಾಮಪ್ಪ, ತಾಲೂಕು ವೈದ್ಯಾಧಿಕಾರಿ ಎಸ್.ಪಿ.ಪ್ರದೀಪ್, ನೌಕರರ ಸಂಘದ ಅಧ್ಯಕ್ಷ ಎಸ್.ವೆಂಕಟೇಶ್, ಗ್ಯಾರಂಟಿ ಯೋಜನೆ ಅಧ್ಯಕ್ಷ ಜಿಲಾನ್, ಡಿವೈಎಸ್ಪಿ ಮಲ್ಲೇಶಪ್ಪ ದೊಡ್ಡಮನಿ, ತಳವಾರ್ ಶರಣಪ್ಪ, ನಿವೃತ್ತ ಇಒ ಬಸಣ್ಣ, ಜಿ.ಎಂ.ಪ್ರಸನ್ನ, ಸಿಡೇಗಲ್ ಬಸವರಾಜ, ಗುಡೇಕೋಟೆ ಎಸ್.ನಾಗರಾಜ್, ಬಣವಿಕಲ್ಲು ಎರಿಸ್ವಾಮಿ, ಎನ್ಕಪ್ಪ, ಸಿದ್ದಬಸಣ್ಣ, ಮಾಜಿ ಅಧ್ಯಕ್ಷ ಅಂಜಿನಪ್ಪ, ಲಿಂಗಪ್ಪ, ಬಿಷ್ಟಳ್ಳಿ ನಿಂಗಣ್ಣ, ಶ್ರೀಧರ ನಾಯ್ಕ, ಕುಮಾರಸ್ವಾಮಿ, ಕುಶಿ, ಗುರುಸಿದ್ದಣ್ಣ, ಓಂ.ರಾಜಪ್ಪ, ಪೂಜಾರಿ ಲಕ್ಷ್ಮಣ, ಚಿತ್ತಪ್ಪ, ಪಾಲಯ್ಯ, ಶಿವರಾಂ, ಷಡಕ್ಷರಿ, ಬಣಕಾರ್ ವೀರಭದ್ರಪ್ಪ, ಬಾಬು, ಮಲಿಯಪ್ಪ ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು, ಸ್ಥಳೀಯ ಮುಖಂಡರು ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಉಪಸ್ಥಿತರಿದ್ದರು.

ಪೆಟ್ರೋಲ್ ಬಂಕ್ಗಳಲ್ಲಿ ಎಥೆನಾಲ್ ಮಿಶ್ರಣದ ಪ್ರಮಾಣ ಪ್ರದರ್ಶಿಸಲು ಆಗ್ರಹ



ಬಳ್ಳಾರಿ: ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಇ20 ಎಥೆನಾಲ್ ಮಿಶ್ರಿತ ಪೆಟ್ರೋಲ್ನಿಂದ ವಾಹನಗಳ ಮೈಲೇಜ್ ಕಡಿಮೆಯಾಗುತ್ತಿದ್ದು, ಹಳೆಯ ವಾಹನಗಳ ಎಂಜಿನ್ಗಳು ಹಾಳಾಗುವ ಭೀತಿ ಎದುರಾಗಿದೆ. ಹೀಗಾಗಿ ಗ್ರಾಹಕರ ಹಿತದೃಷ್ಟಿಯಿಂದ ಪ್ರತಿಯೊಂದು ಪೆಟ್ರೋಲ್ ಬಂಕ್ನಲ್ಲೂ ಎಥೆನಾಲ್ ಮಿಶ್ರಣದ ಪ್ರಮಾಣವನ್ನು ಕಡ್ಡಾಯವಾಗಿ ಪ್ರದರ್ಶಿಸಬೇಕು ಎಂದು ಬುಡಾ ಮಾಜಿ ಅಧ್ಯಕ್ಷ ನಾರಾ ಪ್ರತಾಪ್ ರೆಡ್ಡಿ ಒತ್ತಾಯಿಸಿದರು.

ನಗರದ ಖಾಸಗಿ ಹೋಟೆಲ್ನಲ್ಲಿ ರವಿವಾರ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಎಥೆನಾಲ್ ಮಿಶ್ರಣದಿಂದ ವಾಹನಗಳ ಕಾರ್ಯಕ್ಷಮತೆ ಮತ್ತು ಇಂಧನ ದಕ್ಷತೆ ಕುಸಿಯುತ್ತಿದೆ. 2021ರ ನೀತಿ ಆಯೋಗದ ವರದಿಯ ಪ್ರಕಾರ, ಇ20 ಇಂಧನ ಬಳಕೆಯಿಂದ ಹೊಸ ವಾಹನಗಳಲ್ಲಿ ಶೇ.1ರಿಂದ 2ರಷ್ಟು, ಹಳೆಯ ಕಾರುಗಳಲ್ಲಿ ಶೇ.6ರಿಂದ 7ರಷ್ಟು ಹಾಗೂ ಹಳೆಯ ದ್ವಿಚಕ್ರ ವಾಹನಗಳಲ್ಲಿ ಶೇ.3ರಿಂದ 4ರಷ್ಟು ಮೈಲೇಜ್ ಕಡಿಮೆಯಾಗುತ್ತದೆ. ವಿಶೇಷವಾಗಿ ಬಿಎಸ್6 ಪೂರ್ವದ ವಾಹನಗಳ ಮಾಲೀಕರು ತೀವ್ರ ಸಮಸ್ಯೆ ಎದುರಿಸುತ್ತಿದ್ದಾರೆ ಎಂದರು.

ತುಂಗಭದ್ರಾ ನದಿಯಿಂದ ಎಲ್ಎಲ್ಸಿ (ಕೆಳಮಟ್ಟದ) ಕಾಲುವೆಗಳಿಗೆ ಸಮರ್ಪಕವಾಗಿ ನೀರು ಹರಿಸಿ ರೈತರ ಬೆಳೆಗಳನ್ನು ರಕ್ಷಿಸಬೇಕು. ನೀರಿನ ಅಭಾವದಿಂದ ಕೃಷಿಕರು ನಷ್ಟ ಅನುಭವಿಸದಂತೆ ಸರ್ಕಾರ ತಕ್ಷಣ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ನಗರದ ಕೆಲವು ಹೋಟೆಲ್ಗಳಲ್ಲಿ ಕಲಬೆರಕೆ ಮಾಂಸ ಪೂರೈಕೆಯಾಗುತ್ತಿದೆ ಎಂಬ ದೂರುಗಳಿದ್ದು, ಆಹಾರ ಸುರಕ್ಷತಾ ಅಧಿಕಾರಿಗಳು ತಕ್ಷಣ ಗಂಭೀರ ತನಿಖೆ ನಡೆಸಬೇಕು. ಮಾಂಸದ ಗುಣಮಟ್ಟ ಹಾಗೂ ಅದರ ಮೂಲವನ್ನು ಪರಿಶೀಲಿಸಿ, ನಿಯಮ ಉಲ್ಲಂಘಿಸುವ ಹೋಟೆಲ್ ಮಾಲೀಕರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

ಗ್ರಾಮೀಣ ರಂಗಭೂಮಿಗೆ ಸಿಕ್ಕ ಜಿಲ್ಲಾ ಗೌರವ: ಹರೀಶ್ ಜಿಂಕೆಗೆ ಅಭಿನಂದನೆ



ಕೂಡ್ಲಿಗಿ: ಹಳ್ಳಿಯ ಮಣ್ಣಿನಲ್ಲಿ ಹುಟ್ಟಿ, ಹಳ್ಳಿಯ ಜನರ ಮಧ್ಯೆ ಬೆಳೆದು, ರಂಗಭೂಮಿಯನ್ನೇ ಬದುಕಾಗಿಸಿಕೊಂಡ ಕಲಾವಿದನಿಗೆ ಜಿಲ್ಲೆಯ ಗೌರವ ಸಿಕ್ಕರೆ, ಅದು ಒಬ್ಬ ವ್ಯಕ್ತಿಗೆ ಸಿಕ್ಕ ಗೌರವವಲ್ಲ. ಇಡೀ ಗ್ರಾಮೀಣ ರಂಗಭೂಮಿಗೆ ಸಿಕ್ಕ ಗೌರವ.

ಅಂತಹ ಗೌರವಕ್ಕೆ ಪಾತ್ರರಾದವರು ಕೂಡ್ಲಿಗಿ ತಾಲೂಕಿನ ಟಿ.ಕಲ್ಲಹಳ್ಳಿಯ ಗ್ರಾಮೀಣ ಪ್ರತಿಭೆ, ರಂಗಭೂಮಿ ಕಲಾವಿದ ಹರೀಶ್ ಜಿಂಕೆ.

ವಿಜಯನಗರ ಜಿಲ್ಲಾ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪಡೆದ ಹರೀಶ್ ಜಿಂಕೆ ಅವರ ಕಲಾಸೇವೆಯನ್ನು ಗುರುತಿಸಿ, ಗುಡೇಕೋಟೆ ವಿ.ಆರ್.ಜಿ. ಕುಟುಂಬದ ವತಿಯಿಂದ ಅಭಿನಂದನಾ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ತಾಲೂಕಿನ ಗುಡೇಕೋಟೆ ಗ್ರಾಮದ ವಿ.ಆರ್.ಜಿ. ನಿವಾಸದಲ್ಲಿ ಶುಕ್ರವಾರ (ನ.6) ನಡೆದ ಕಾರ್ಯಕ್ರಮದಲ್ಲಿ ಸಾಹಿತಿ ಭೀಮಣ್ಣ ಗಜಾಪುರ ಅವರು ಮಾತನಾಡಿ, ಗ್ರಾಮೀಣ ಭಾಗದಲ್ಲಿ ಕಲೆಯನ್ನು ಉಸಿರಾಗಿಸಿಕೊಂಡು ರಂಗಭೂಮಿಯಲ್ಲಿ ನಿರಂತರವಾಗಿ ಸೇವೆ ಸಲ್ಲಿಸುತ್ತಿರುವ ಕಲಾವಿದ ಹರೀಶ್ ಜಿಂಕೆ ಅವರಿಗೆ ಜಿಲ್ಲಾ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ದೊರೆತಿರುವುದು ಇಡೀ ತಾಲೂಕಿನ ಹೆಮ್ಮೆಯ ಸಂಗತಿ. ಹಣ, ಪ್ರಚಾರದ ಹಿಂದೆ ಹೋಗದೆ, ಕಲೆಯನ್ನೇ ದೇವರು ಎಂದು ನಂಬಿ ಬದುಕಿದವರಿಗೆ ಸಿಕ್ಕ ಗೌರವ ಇದು. ಅವರ ಕಲಾಸಾಧನೆ ಇತರ ಯುವ ಕಲಾವಿದರಿಗೆ ಪ್ರೇರಣೆಯಾಗಲಿ ಎಂದು ಆಶಯ ವ್ಯಕ್ತಪಡಿಸಿದರು.

ರಂಗಭೂಮಿ ಕ್ಷೇತ್ರದಲ್ಲಿ ತಮ್ಮದೇ ಆದ ಗುರುತನ್ನು ಮೂಡಿಸಿರುವ ಹರೀಶ್ ಜಿಂಕೆ ಅವರ ಸಾಧನೆಗೆ ಮೆಚ್ಚುಗೆ ವ್ಯಕ್ತಪಡಿಸಿದ ನಿವೃತ್ತ ಪ್ರಾಂಶುಪಾಲರಾದ ಡಾ.ಎಂ.ರಾಜಣ್ಣ ಅವರು, ಹರೀಶ್ ಜಿಂಕೆ ಅವರನ್ನು ಆತ್ಮೀಯವಾಗಿ ಅಭಿನಂದಿಸಿದರು. ಕಲೆ ಎಂದರೆ ಕೇವಲ ಮನರಂಜನೆಯಲ್ಲ, ಅದು ಸಂಸ್ಕೃತಿ, ಅದು ಸಂಸ್ಕಾರ. ಅಂತಹ ಕಲೆಯನ್ನು ಹಳ್ಳಿ ಹಳ್ಳಿಗೆ ತಲುಪಿಸಿದ ಕೀರ್ತಿ ಹರೀಶ್ ಅವರದು ಎಂದರು.

ಈ ಸಂದರ್ಭದಲ್ಲಿ ಹರೀಶ್ ಜಿಂಕೆ ಅವರಿಗೆ ಶಾಲು, ಹಾರ, ಸ್ಮರಣಿಕೆ ನೀಡಿ ಗೌರವಿಸಲಾಯಿತು. ಅಭಿನಂದನೆ ಸ್ವೀಕರಿಸಿದ ಹರೀಶ್ ಜಿಂಕೆ ಅವರು, ಈ ಪ್ರಶಸ್ತಿ ನನ್ನೊಬ್ಬನದಲ್ಲ, ನನ್ನ ಜೊತೆ ನಾಟಕ ಮಾಡಿದ ಎಲ್ಲಾ ಕಲಾವಿದರದ್ದು, ನನ್ನನ್ನು ಪ್ರೋತ್ಸಾಹಿಸಿದ ಹಿರಿಯರದ್ದು ಎಂದು ಭಾವುಕರಾಗಿ ಹೇಳಿದರು.

ಈ ಸಂದರ್ಭದಲ್ಲಿ* ವಿ.ಆರ್.ಜಿ. ಕುಟುಂಬದ ಮಾಜಿ ತಾಪಂ ಉಪಾಧ್ಯಕ್ಷೆ ಎಂ.ವಿಶಾಲಾಕ್ಷಿ ರಾಜಣ್ಣ, ಸದಸ್ಯರು, ಕನಿಪ ತಾಲೂಕು ಅಧ್ಯಕ್ಷ ಹುಡೇಂ ಕೃಷ್ಣಮೂರ್ತಿ, ನಾಟಕ ಅಕಾಡೆಮಿ ಸದಸ್ಯ ಶಿವನಾಯಕ ದೊರೆ, ಸಂಜೆವಾಣಿ ನಾಗರಾಜ್, ಶಿಕ್ಷಕ ಎಚ್.ಪಾಂಡುರಂಗ, ಗುರು ಶಂಕ್ರಪ್ಪ, ಮನೋಹರ್ ಹೆಗಡೆ, ಪಿಡಿಒ ಜಿ.ಹನುಮಂತಪ್ಪ, ಮಾಜಿ ಗ್ರಾಪಂ ಸದಸ್ಯ ಕೆ.

ಡಿಎಸ್‌ಎಸ್ ಕೇವಲ ಸಂಘಟನೆಯಾಗದೆ ಶೋಷಿತರ ಧ್ವನಿಯಾಗಬೇಕು: ಜಿಲ್ಲಾ ಸಂಚಾಲಕ ಎಸ್. ದುರುಗೇಶ್



ಕೂಡ್ಲಿಗಿ: ಕರ್ನಾಟಕ ದಲಿತ ಸಂಘರ್ಷ ಸಮಿತಿ (ಪ್ರೊ. ಬಿ. ಕೃಷ್ಣಪ್ಪ ಸ್ಥಾಪಿತ) ಕೇವಲ ಒಂದು ಸಂಘಟನೆಯಾಗಿ ಉಳಿಯದೆ, ಹಳ್ಳಿ ಹಳ್ಳಿಗಳಲ್ಲಿ ಶೋಷಿತರ, ಹಿಂದುಳಿದವರ, ಬಡವರ ಹಾಗೂ ದುರ್ಬಲ ವರ್ಗಗಳ ಧ್ವನಿಯಾಗಿ ಕಾರ್ಯನಿರ್ವಹಿಸಬೇಕು. ಸಮಾಜದಲ್ಲಿ ಅನ್ಯಾಯ ಮತ್ತು ಶೋಷಣೆಗೆ ಒಳಗಾಗುವವರ ಪರವಾಗಿ ನಿಂತು ಅವರಿಗೆ ನ್ಯಾಯ ದೊರಕಿಸಿಕೊಡುವ ನಿಟ್ಟಿನಲ್ಲಿ ಸಂಘಟನೆ ಶ್ರಮಿಸಬೇಕು ಎಂದು ವಿಜಯನಗರ ಜಿಲ್ಲಾ ದಲಿತ ಸಂಘರ್ಷ ಸಮಿತಿಯ ಜಿಲ್ಲಾ ಸಂಚಾಲಕ ಎಸ್. ದುರುಗೇಶ್ ಹೇಳಿದರು.

ತಾಲೂಕಿನ ಸಿಡೇಗಲ್ ಗ್ರಾಮದಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ (ಪ್ರೊ. ಬಿ. ಕೃಷ್ಣಪ್ಪ ಬಣ) ವತಿಯಿಂದ ಆಯೋಜಿಸಿದ್ದ ಗ್ರಾಮ ಘಟಕದ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಡಾ. ಬಿ.ಆರ್. ಅಂಬೇಡ್ಕರ್ ಅವರ ಸಮಾನತೆ, ಸ್ವಾತಂತ್ರ್ಯ ಮತ್ತು ಸಹೋದರತ್ವದ ತತ್ವಗಳನ್ನು ಆಧಾರವಾಗಿಟ್ಟುಕೊಂಡು ಪ್ರೊ. ಬಿ. ಕೃಷ್ಣಪ್ಪ ಅವರ ನೇತೃತ್ವದಲ್ಲಿ ಬೆಳೆದು ಬಂದಿರುವ ದಲಿತ ಸಂಘರ್ಷ ಸಮಿತಿ ರಾಜ್ಯದ ಮೂಲೆ ಮೂಲೆಗಳಿಗೂ ತಲುಪಿದೆ ಎಂದು ತಿಳಿಸಿದರು.

ದಲಿತರು, ಹಿಂದುಳಿದವರು, ಬಡವರು, ಕೂಲಿ ಕಾರ್ಮಿಕರು ಹಾಗೂ ಮಹಿಳೆಯರ ಹಕ್ಕುಗಳ ರಕ್ಷಣೆ, ಸಾಮಾಜಿಕ ನ್ಯಾಯ, ಶಿಕ್ಷಣ, ಭೂಮಿ ಮತ್ತು ಉದ್ಯೋಗಕ್ಕಾಗಿ ಹೋರಾಡುವುದು ಸಂಘಟನೆಯ ಮೂಲ ಉದ್ದೇಶವಾಗಿದೆ. ಸಮಾಜದಲ್ಲಿ ಶೋಷಣೆಗೆ ಒಳಗಾಗುವ ಜನರಿಗೆ ನ್ಯಾಯ ಒದಗಿಸುವುದರ ಜೊತೆಗೆ ಸರ್ಕಾರದ ಸೌಲಭ್ಯಗಳು ಅರ್ಹ ಫಲಾನುಭವಿಗಳಿಗೆ ತಲುಪುವಂತೆ ಜಾಗೃತಿ ಮೂಡಿಸಬೇಕು. ಸರ್ಕಾರದ ಯೋಜನೆಗಳು ಕೇವಲ ಕಡತಗಳಲ್ಲಿ ಮತ್ತು ಕಾಗದದ ಮೇಲೆ ಉಳಿಯದೆ ನಿಜವಾಗಿಯೂ ಬಡವರ ಮನೆ ಬಾಗಿಲಿಗೆ ತಲುಪಬೇಕು. ಈ ನಿಟ್ಟಿನಲ್ಲಿ ಸಂಘಟನೆಯ ಪ್ರತಿಯೊಬ್ಬ ಕಾರ್ಯಕರ್ತರೂ ಜವಾಬ್ದಾರಿಯಿಂದ ಕೆಲಸ ಮಾಡಬೇಕು ಎಂದು ಕರೆ ನೀಡಿದರು.

ಗ್ರಾಮದಲ್ಲಿ ಎಲ್ಲರೂ ಪರಸ್ಪರ ಪ್ರೀತಿ, ವಿಶ್ವಾಸ ಮತ್ತು ಸಹಬಾಳ್ವೆಯಿಂದ ಜೀವನ ನಡೆಸಬೇಕು. ಜಾತಿ, ಭೇದಭಾವ ಹಾಗೂ ಅಸಮಾನತೆಗಳಿಗೆ ಅವಕಾಶ ನೀಡದೆ ಅಣ್ಣತಮ್ಮಂದಿರಂತೆ ಒಗ್ಗಟ್ಟಿನಿಂದ ಇರಬೇಕು. ಸರ್ಕಾರದಿಂದ ದೊರೆಯುವ ವಿವಿಧ ಸೌಲಭ್ಯಗಳು ಮತ್ತು ಯೋಜನೆಗಳ ಬಗ್ಗೆ ಮಾಹಿತಿ ಪಡೆದು ಅವುಗಳನ್ನು ಸದುಪಯೋಗಪಡಿಸಿಕೊಳ್ಳಬೇಕು. ವಿಶೇಷವಾಗಿ ಪೋಷಕರು ತಮ್ಮ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವ ಮೂಲಕ ಅವರನ್ನು ಸಮಾಜದ ಜವಾಬ್ದಾರಿಯುತ ನಾಗರಿಕರನ್ನಾಗಿ ರೂಪಿಸಬೇಕು ಎಂದು ಸಲಹೆ ನೀಡಿದರು.

ಶಿಕ್ಷಣವೇ ಸಾಮಾಜಿಕ ಪರಿವರ್ತನೆಯ ಪ್ರಮುಖ ಅಸ್ತ್ರವಾಗಿದೆ. ಶಿಕ್ಷಣದ ಮೂಲಕ ಮಾತ್ರ ಸಮಾಜದಲ್ಲಿ ಸಮಾನತೆ, ಸ್ವಾಭಿಮಾನ ಮತ್ತು ಆರ್ಥಿಕ ಸ್ವಾವಲಂಬನೆ ಸಾಧಿಸಲು ಸಾಧ್ಯ. ಆದ್ದರಿಂದ ಗ್ರಾಮಮಟ್ಟದಲ್ಲಿ ಶಿಕ್ಷಣದ ಮಹತ್ವದ ಕುರಿತು ಜಾಗೃತಿ ಮೂಡಿಸುವುದು ಸಂಘಟನೆಯ ಪ್ರಮುಖ ಆದ್ಯತೆಯಾಗಬೇಕು. ಸಂಘಟನೆಯು ಕೇವಲ ಸಭೆ, ಸಮಾರಂಭಗಳಿಗೆ ಸೀಮಿತವಾಗದೆ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಜನಪರ ಶಕ್ತಿಯಾಗಿ ಬೆಳೆಯಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಸಂಘಟನಾ ಸಂಚಾಲಕ ಬಿ.ಟಿ. ಗುದ್ದಿ ದುರುಗೇಶ್ ಹಾಗೂ ಕಂದಗಲ್ ಕೆ. ಪರಶುರಾಮ ಮಾತನಾಡಿ, ದಲಿತ ಸಂಘರ್ಷ ಸಮಿತಿಯು ಸಮಾಜದಲ್ಲಿ ಜಾಗೃತಿ ಮೂಡಿಸುವುದರ ಜೊತೆಗೆ ಶೋಷಿತ ಮತ್ತು ಹಿಂದುಳಿದ ವರ್ಗಗಳ ಹಕ್ಕುಗಳಿಗಾಗಿ ನಿರಂತರವಾಗಿ ಶ್ರಮಿಸುತ್ತಿದೆ. ಗ್ರಾಮಮಟ್ಟದಲ್ಲಿ ಸಂಘಟನೆ ಬಲಿಷ್ಠವಾಗಿ ಬೆಳೆದು ಜನರ ಸಮಸ್ಯೆಗಳಿಗೆ ಧ್ವನಿಯಾಗಬೇಕು. ಸಾಮಾಜಿಕ ನ್ಯಾಯ ಮತ್ತು ಸಮಾನತೆಯ ಸಮಾಜ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ತಾಲೂಕು ಸಂಚಾಲಕ ಬಡೇಲಡಕು ದುರುಗೇಶ್ ವಹಿಸಿದ್ದರು. ಈ ಸಂದರ್ಭದಲ್ಲಿ ಗುಡೇಕೋಟೆ ಗ್ರಾಮ ಪಂಚಾಯಿತಿ ಬಿಲ್ ಕಲೆಕ್ಟರ್ ಎರೀಸ್ವಾಮಿ ಆಚಾರಿ, ಮಾಜಿ ಗ್ರಾಮ ಪಂಚಾಯಿತಿ ಸದಸ್ಯ ಕಾಮತ್ ನಿಂಗಯ್ಯ, ಕಾಮ್ರೇಡ್ ರಮೇಶ್ ಗೌಡ್ರು, ಕೃಷ್ಣಪ್ಪ, ಎಚ್. ಓಬಯ್ಯ, ಜಿ. ಬಸವರಾಜ, ಬೊಮ್ಮಣ್ಣ, ಅನಿತಮ್ಮ ಬೊಮ್ಮಣ್ಣ, ಸಿದ್ದಣ್ಣ, ಅಂಗಡಿ ಕೃಷ್ಣಪ್ಪ, ನಿಂಗಣ್ಣ, ಕಾಟೇನಳ್ಳಿ ಈರಣ್ಣ, ಮರ್ಲಹಳ್ಳಿ ಪಾಪಣ್ಣ, ಬಾಬಣ್ಣ, ಗುಡೇಕೋಟೆ ಪೊಲೀಸ್ ಠಾಣೆಯ ಮೋಹನ್, ಚೆನ್ನಪ್ಪ, ಹೊಸಳ್ಳಿ ನಾಗಣ್ಣ, ಕಾನಾಮಡುಗು ದುರುಗಪ್ಪ, ಕುಂಬಾರ ಶೀನಪ್ಪ, ಮರ್ಲಹಳ್ಳಿ ನಾಗರಾಜ, ಚಿನ್ನೋಬನಹಳ್ಳಿ ಬಾಬಣ್ಣ, ಕುರಿಹಟ್ಟಿ ಮಹಾಂತೇಶ್, ಸೈಕಲ್ ಬಸವರಾಜ, ಬಣವಿಕಲ್ಲು ಚೌಡೇಶ್, ಜುಮ್ಮೋಬನಹಳ್ಳಿ ಹೊನ್ನೂರಪ್ಪ, ಕಾನಾಮಡುಗು ಫಕೀರಪ್ಪ, ಮಾಳೆಹಳ್ಳಿ ಮಂಜು, ಕುಮತಿ ಯಲ್ಲಪ್ಪ, ಲೋಕಿಕೆರೆ ಶಿವಣ್ಣ, ಕುರಿಹಟ್ಟಿ ರಾಜು, ಮಾಜಿ ಸದಸ್ಯೆ ಕಲ್ಪನಾ ಸೇರಿದಂತೆ ಕೂಡ್ಲಿಗಿ ತಾಲೂಕಿನ ವಿವಿಧ ಗ್ರಾಮಗಳ ಮುಖಂಡರು, ಸಂಘಟನೆಯ ಪದಾಧಿಕಾರಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಹಾಲು, ಹಾಲಿನ ಉತ್ಪನ್ನಗಳ ಬೆಲೆ ಏರಿಕೆ ಹಿಂಪಡೆಯಲು ವಿಮೆನ್ ಇಂಡಿಯಾ ಮೂವ್‌ಮೆಂಟ್ ಆಗ್ರಹ



ಹೊಸಪೇಟೆ : ಹಾಲು ಮತ್ತು ಹಾಲಿನ ಉತ್ಪನ್ನಗಳ ಬೆಲೆ ಏರಿಕೆಯನ್ನು ತಕ್ಷಣ ಹಿಂಪಡೆಯುವ ಮೂಲಕ ಜನಸಾಮಾನ್ಯರು, ಮಹಿಳೆಯರು ಹಾಗೂ ಮಕ್ಕಳ ಹಿತಾಸಕ್ತಿ ಕಾಪಾಡಬೇಕು ಎಂದು ಒತ್ತಾಯಿಸಿ ವಿಮೆನ್ ಇಂಡಿಯಾ ಮೂವ್‌ಮೆಂಟ್ ವಿಜಯನಗರ ಜಿಲ್ಲಾ ಸಮಿತಿಯ ವತಿಯಿಂದ ಶುಕ್ರವಾರ ಹೊಸಪೇಟೆಯ ತಾಲೂಕು ಕಚೇರಿ ಎದುರು ಪ್ರತಿಭಟನೆ ನಡೆಸಲಾಯಿತು.

ಈ ಸಂದರ್ಭದಲ್ಲಿ ಪ್ರತಿಭಟನಾಕಾರರು ಬೆಲೆ ಏರಿಕೆ ವಿರುದ್ಧ ಘೋಷಣೆಗಳನ್ನು ಕೂಗಿ, ಮುಖ್ಯಮಂತ್ರಿ ಅವರಿಗೆ ಉದ್ದೇಶಿಸಿದ ಮನವಿ ಪತ್ರವನ್ನು ತಹಶೀಲ್ದಾರ್ ಮೂಲಕ ಸಲ್ಲಿಸಿದರು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಘಖಒ ಮುಖಂಡರು, ಈಗಾಗಲೇ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳು ಆರ್ಥಿಕ ಸಂಕಷ್ಟ ಎದುರಿಸುತ್ತಿವೆ. ಇಂತಹ ಸಂದರ್ಭದಲ್ಲಿ ಹಾಲು ಹಾಗೂ ಹಾಲಿನ ಉತ್ಪನ್ನಗಳ ಬೆಲೆ ಹೆಚ್ಚಿಸಿರುವುದು ಜನಸಾಮಾನ್ಯರ ಮೇಲೆ ಮತ್ತಷ್ಟು ಆರ್ಥಿಕ ಹೊರೆ ಹೇರಿದಂತಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಹಾಲು ಪ್ರತಿಯೊಂದು ಕುಟುಂಬದ ದೈನಂದಿನ ಆಹಾರದ ಪ್ರಮುಖ ಭಾಗವಾಗಿದೆ. ಅದರ ಬೆಲೆ ಏರಿಕೆಯು ವಿಶೇಷವಾಗಿ ಮಕ್ಕಳು, ಮಹಿಳೆಯರು ಮತ್ತು ವೃದ್ಧರ ಪೌಷ್ಟಿಕ ಆಹಾರದ ಮೇಲೂ ಪರಿಣಾಮ ಬೀರಲಿದೆ. ಸರ್ಕಾರ ರೈತರ ಹಿತಾಸಕ್ತಿಯನ್ನು ಕಾಪಾಡುವುದರ ಜತೆಗೆ ಗ್ರಾಹಕರಿಗೂ ಹೊರೆಯಾಗದ ಸಮತೋಲಿತ ಬೆಲೆ ನೀತಿಯನ್ನು ಜಾರಿಗೊಳಿಸಬೇಕು. ಆದ್ದರಿಂದ ಹಾಲು ಮತ್ತು ಹಾಲಿನ ಉತ್ಪನ್ನಗಳ ಬೆಲೆ ಏರಿಕೆಯನ್ನು ಕೂಡಲೇ ಹಿಂಪಡೆಯಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ವಿಜಯನಗರ ಜಿಲ್ಲಾ ಅಧ್ಯ–ಕ್ಷೆ ಹೀನಾ ಕೌಸರ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಆರಿಫಾ, ಜಿಲ್ಲಾ ಉಪಾಧ್ಯಕ್ಷರಾದ ಸನಾ ಬಾನು, ಆಯಿಷಾ, ಹೀನಾ, ರೈತ ಮುಖಂಡ ಜಿ. ಖಾಜಾ ಹುಸೇನ್ ನಿಯಾಜಿ, ಖಖಕಖ ವಿಜಯನಗರ ಜಿಲ್ಲಾ ಅಧ್ಯಕ್ಷ ಸದ್ದಾಂ ಹಂಪಿ, ಜಾಫರ್ ಹುಸೇನ್ ಸೇರಿದಂತೆ ಘಖಒ ಕಾರ್ಯಕರ್ತರು ಹಾಗೂ ಇತರರು ಉಪಸ್ಥಿತರಿದ್ದರು.

ಬೆಲೆ ಏರಿಕೆಯಿಂದ ಜನಸಾಮಾನ್ಯರ ಬದುಕು ದುಸ್ತರವಾಗುತ್ತಿರುವ ಹಿನ್ನೆಲೆಯಲ್ಲಿ ಮಹಿಳೆಯರು ಮತ್ತು ಜನಸಾಮಾನ್ಯರ ಹಿತದೃಷ್ಟಿಯಿಂದ ಬೆಲೆ ಏರಿಕೆ ಹಿಂಪಡೆಯುವವರೆಗೆ ಹೋರಾಟ ಮುಂದುವರಿಸಲಾಗುವುದು ಎಂದು ಘಖಒ ಮುಖಂಡರು ಎಚ್ಚರಿಸಿದರು.

ಹೊಸಪೇಟೆ ಪ್ರಜಾಸೇವಾ ಅಭಿಯಾನದಲ್ಲಿ 71 ಅರ್ಜಿ ಸ್ವೀಕಾರ : ಆಲಂ ಭಾಷಾ



ವಿಜಯನಗರ : ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಜನಪರ ಪ್ರಜಾಸೇವಾ ಕಾರ್ಯಕ್ರಮದಡಿ ತಾಲೂಕು ಮಟ್ಟದಲ್ಲಿ ಒಟ್ಟು 71 ಅರ್ಜಿಗಳು ಸ್ವೀಕೃತಿಯಾಗಿವೆ. ತಕ್ಷಣವೇ ಪರಿಹರಿಸಬಹುದಾದ ಸಮಸ್ಯೆಗಳನ್ನು ಸ್ಥಳದಲ್ಲಿಯೇ ಬಗೆಹರಿಸಲಾಗುವುದು. ಕಾಲಮಿತಿಯೊಳಗೆ ಪರಿಹರಿಸಬೇಕಾದ ಅರ್ಜಿಗಳಿಗೆ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು ಎಂದು ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಆಲಂ ಭಾಷಾ ಹೇಳಿದರು.

ನಗರದ ಜಿಲ್ಲಾ ಒಳಾಂಗಣ ಕ್ರೀಡಾಂಗಣದಲ್ಲಿ ಶನಿವಾರ ಆಯೋಜಿಸಿದ್ದ ತಾಲೂಕು ಮಟ್ಟದ ಪ್ರಜಾಸೇವಾ ಅಭಿಯಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯ ಸರ್ಕಾರದ ಜನಪರ ನೀತಿಗಳು ಹಾಗೂ ಮುಖ್ಯಮಂತ್ರಿಗಳ ಆಶಯದಂತೆ ರಾಜ್ಯದ ಜನರ ಸಮಸ್ಯೆಗಳಿಗೆ ಸ್ಪಂದಿಸಿ, ಅವರ ಅಹವಾಲುಗಳಿಗೆ ಪರಿಹಾರ ಕಲ್ಪಿಸುವ ಉದ್ದೇಶದಿಂದ ಪ್ರಜಾಸೇವಾ ಕಾರ್ಯಕ್ರಮವನ್ನು ಆರಂಭಿಸಲಾಗಿದೆ ಎಂದು ತಿಳಿಸಿದರು. ಹೊಸಪೇಟೆ ನಗರಸಭೆಗೆ ಸಂಬಂಧಿಸಿದ 34 ಅರ್ಜಿಗಳು, ತಾಲೂಕು ಪಂಚಾಯಿತಿಗೆ 23, ಆಹಾರ ಇಲಾಖೆಗೆ 5 ಹಾಗೂ ಕಂದಾಯ ಇಲಾಖೆಗೆ 2 ಅರ್ಜಿಗಳು ಸೇರಿದಂತೆ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ ಒಟ್ಟು 71 ಅರ್ಜಿಗಳು ಸ್ವೀಕೃತಿಯಾಗಿವೆ ಎಂದು ಮಾಹಿತಿ ನೀಡಿದರು.

ಪ್ರಜಾಸೇವಾ ಅಭಿಯಾನದಡಿ ವಿವಿಧ ಇಲಾಖೆಗಳ ಅಧಿಕಾರಿಗಳು ಒಂದೇ ಸೂರಿನಡಿ, ಒಂದೇ ವೇದಿಕೆಯಲ್ಲಿ ಸಾರ್ವಜನಿಕರ ಅಹವಾಲು ಮತ್ತು ಅರ್ಜಿಗಳನ್ನು ಸ್ವೀಕರಿಸುವ ವ್ಯವಸ್ಥೆ ಮಾಡಲಾಗಿದೆ. ಎಲ್ಲಾ ಅರ್ಜಿಗಳನ್ನು ಆನ್‌ಲೈನ್ ಮೂಲಕ ದಾಖಲಿಸಿ, ಅವುಗಳ ವಿಲೇವಾರಿಗೆ ಸೂಕ್ತ ಕ್ರಮ ಕೈಗೊಳ್ಳಲಾಗುತ್ತದೆ. ಈ ಪ್ರಕ್ರಿಯೆಯ ಮೇಲ್ವಿಚಾರಣೆಯನ್ನೂ ನಡೆಸಲಾಗುವುದು ಎಂದು ಹೇಳಿದರು. ಸಾರ್ವಜನಿಕರು ತಮ್ಮ ಸಮಸ್ಯೆಗಳ ಪರಿಹಾರಕ್ಕಾಗಿ ವಿವಿಧ ಸರ್ಕಾರಿ ಕಚೇರಿಗಳಿಗೆ ಅಲೆದಾಡುವುದನ್ನು ತಪ್ಪಿಸಿ, ಅವರ ಸಮಸ್ಯೆಗಳನ್ನು ಆಲಿಸಿ ಸೂಕ್ತವಾಗಿ ಸ್ಪಂದಿಸಲು ಪ್ರಜಾಸೇವಾ ಕಾರ್ಯಕ್ರಮ ಸಹಕಾರಿಯಾಗಲಿದೆ. ಆದ್ದರಿಂದ ಸಾರ್ವಜನಿಕರು ಈ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ರೇಷ್ಮೆ ಇಲಾಖೆ ಉಪನಿರ್ದೇಶಕ ಹರ್ಷ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಗಂಗಪ್ಪ, ತಹಶೀಲ್ದಾರ್ ಕಾರ್ತಿಕ, ನಗರಸಭೆ ಪೌರಾಯುಕ್ತ ಎರಗುಡಿ ಶಿವಕುಮಾರ್ ಸೇರಿದಂತೆ ವಿವಿಧ ಇಲಾಖೆಗಳ ತಾಲೂಕು ಮಟ್ಟದ ಅಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಪಿಂಜಾರ, ನದಾಫ್ ಸಮುದಾಯದ ಅಭಿವೃದ್ಧಿಗೆ ಸರ್ಕಾರ ಬದ್ಧ: ಸಚಿವ ಯು.ಟಿ. ಖಾದರ್



ಬಳ್ಳಾರಿ: ಪಿಂಜಾರ ಮತ್ತು ನದಾಫ್ ಸಮುದಾಯದ ಶೈಕ್ಷಣಿಕ, ಸಾಮಾಜಿಕ ಹಾಗೂ ಸಾಂಸ್ಕೃತಿಕ ಅಭಿವೃದ್ಧಿಗೆ ಕಾಂಗ್ರೆಸ್ ಸರ್ಕಾರ ಬದ್ಧವಾಗಿದ್ದು, ಸಮುದಾಯದ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಆರೋಗ್ಯ ಸಚಿವ ಯು.ಟಿ.ಖಾದರ್ ಭರವಸೆ ನೀಡಿದರು. ನಗರದ ವಾಲ್ಮೀಕಿ ಭವನದಲ್ಲಿ ಕರ್ನಾಟಕ ರಾಜ್ಯ ಪಿಂಜಾರ್/ನದಾಫ್ ಸಂಘದ 34ನೇ ಸಂಸ್ಥಾಪನಾ ದಿನಾಚರಣೆ ಅಂಗವಾಗಿ ಭಾನುವಾರ ಆಯೋಜಿಸಿದ್ದ ರಾಜ್ಯಮಟ್ಟದ ಸಮಾವೇಶ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಬೆಂಗಳೂರು ಸೇರಿದಂತೆ ರಾಜ್ಯದ ಯಾವುದೇ ಭಾಗದಲ್ಲಿ ಪಿಂಜಾರ ಸಮುದಾಯದ ಭವನ ನಿರ್ಮಾಣ ಕಾರ್ಯ ಆರಂಭಿಸಿದರೆ 2 ಕೋಟಿ ರೂ. ಅನುದಾನ ಒದಗಿಸಲಾಗುವುದು. ಜೊತೆಗೆ, ಸಮುದಾಯದ ಇತಿಹಾಸ, ಪರಂಪರೆ ಹಾಗೂ ಸಂಶೋಧನೆಗೆ ಉತ್ತೇಜನ ನೀಡುವ ಉದ್ದೇಶದಿಂದ ಅಧ್ಯಯನ ಪೀಠ ಸ್ಥಾಪಿಸಲು ವಿಶ್ವವಿದ್ಯಾಲಯ ಹಾಗೂ ಸರ್ಕಾರದ ಒಪ್ಪಿಗೆಯೊಂದಿಗೆ 2 ಕೋಟಿ ರೂ. ಕಾರ್ಪಸ್ ಫಂಡ್ ನೀಡಲಾಗುವುದು ಎಂದು ತಿಳಿಸಿದರು. ನಗರ ಶಾಸಕ ನಾರಾ ಭರತ್‌ರೆಡ್ಡಿ ಮಾತನಾಡಿ, ಪಿಂಜಾರ್/ನದಾಫ್ ಸಮಾಜದೊಂದಿಗಿನ ತಮ್ಮ ಬಾಂಧವ್ಯ ಬಹಳ ಹಿಂದಿನದು. ಸಮಾಜದಲ್ಲಿ ಶಾಸಕರು, ಸಂಸದರು ಇಲ್ಲ ಎಂದು ಕೊರಗಬೇಡಿ. ನಾನೇ ನಿಮ್ಮ ಸಮಾಜದ ಶಾಸಕ ಎಂದು ಭಾವಿಸಿ ಎಂದು ಅಭಯ ನೀಡಿದರು. ಇದೇ ವೇಳೆ ಸಂಘದ ಚಟುವಟಿಕೆಗಳಿಗಾಗಿ 10 ಲಕ್ಷ ರೂ. ದೇಣಿಗೆ ಘೋಷಿಸಿದರು. ಕಾರ್ಯಕ್ರಮದಲ್ಲಿ ಸಂಡೂರು ಶಾಸಕಿ ಅನ್ನಪೂರ್ಣಾ ತುಕಾರಾಂ, ಕೆಪಿಸಿಸಿ ಮಾಜಿ ಅಧ್ಯಕ್ಷ ಅಲ್ಲಂ ವೀರಭದ್ರಪ್ಪ, ಖಾಜಿ ಗುಲಾಂ ಮೊಹಮ್ಮದ್ ಸಿದ್ದಿಕಿ, ಪಿಂಜಾರ್ ನದಾಫ್ ಸಮಾಜದ ರಾಜ್ಯಾಧ್ಯಕ್ಷ ಜಲೀಲಸಾಬ್, ವಿಭಾಗ ಅಧ್ಯಕ್ಷ ಶಾಸಾಬ್, ಜಿಲ್ಲಾಧ್ಯಕ್ಷ ಮೌಲಾಲಿ, ನಗರಾಧ್ಯಕ್ಷ ನಬಿಸಾಬ್, ಮೇಯರ್ ಪಿ. ಗಾದೆಪ್ಪ, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಅಲ್ಲಂ ಪ್ರಶಾಂತ್, ಮುಖಂಡರಾದ ಹುಮಾಯೂನ್ ಖಾನ್, ವೆಂಕಟೇಶ್ ಪ್ರಸಾದ್ ಹಾಗೂ ಮಾಜಿ ಶಾಸಕ ಎಂ.ಎಸ್. ಸೋಮಲಿಂಗಪ್ಪ ಉಪಸ್ಥಿತರಿದ್ದರು.

ದೀಪಾವಳಿಗೆ ಹಸಿರು ಪಟಾಕಿ ಬಳಸಿ, ಪರಿಸರ ಸಂರಕ್ಷಿಸಿ: ಡಿಸಿ ಕವಿತಾ ಎಸ್.ಮನ್ನಿಕೇರಿ



ವಿಜಯನಗರ : ದೀಪಾವಳಿ ಹಬ್ಬವನ್ನು ಸಾಂಪ್ರದಾಯಿಕವಾಗಿ ದೀಪಗಳನ್ನು ಬೆಳಗಿಸುವ ಮೂಲಕ ಸಂಭ್ರಮದಿಂದ ಆಚರಿಸಬೇಕು. ವಾಡಿಕೆಯಂತೆ ಪಟಾಕಿ ಸಿಡಿಸುವುದಾದರೆ ರಾಸಾಯನಿಕ ಪಟಾಕಿಗಳನ್ನು ಕೈಬಿಟ್ಟು, ಪರಿಸರ ಸ್ನೇಹಿ ಹಸಿರು ಪಟಾಕಿಗಳನ್ನು ಬಳಸಬೇಕು ಎಂದು ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ ಸಲಹೆ ನೀಡಿದ್ದಾರೆ.

2018ರ ರಾಷ್ಟ್ರೀಯ ಹಸಿರು ನ್ಯಾಯಮಂಡಳಿಯ ಆದೇಶದಂತೆ, ಸಿಎಸ್‌ಐಆರ್ ಮತ್ತು ಎನ್‌ಇಇಆರ್‌ಐ ಸಂಸ್ಥೆಗಳು ಶಿಫಾರಸು ಮಾಡಿರುವ ಹಾಗೂ ಸುಪ್ರೀಂ ಕೋರ್ಟ್‌ನ ಮಾರ್ಗಸೂಚಿಗಳ ಪ್ರಕಾರ ಪರಿಸರ ಸ್ನೇಹಿ ಪಟಾಕಿಗಳನ್ನು ಮಾತ್ರ ಕಡ್ಡಾಯವಾಗಿ ಬಳಸಬೇಕು. ಹಸಿರು ಪಟಾಕಿಗಳ ಮೇಲೆ ಹಾಗೂ ಅವುಗಳ ಪ್ಯಾಕೆಟ್‌ಗಳ ಮೇಲೆ ಹಸಿರು ಪಟಾಕಿಯ ಚಿಹ್ನೆ ಮತ್ತು ಕ್ಯೂಆರ್ ಕೋಡ್ ಇರುತ್ತದೆ. ಈ ಚಿಹ್ನೆ ಇಲ್ಲದ ಪಟಾಕಿಗಳನ್ನು ಹಸಿರು ಪಟಾಕಿಗಳೆಂದು ಪರಿಗಣಿಸಲಾಗುವುದಿಲ್ಲ. ಅಂತಹ ಪಟಾಕಿಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುತ್ತದೆ ಎಂದು ತಿಳಿಸಿದ್ದಾರೆ.

ಹಸಿರು ಪಟಾಕಿಗಳ ತಯಾರಕರು ಹಾಗೂ ಮಾರಾಟಗಾರರಿಗೆ ಮಾತ್ರ ಅನುಮತಿ ನೀಡಲಾಗಿದೆ. ಪಟಾಕಿ ಸಿಡಿಸುವ ಸಂದರ್ಭದಲ್ಲಿ ಪ್ರಾಣಿ, ಪಕ್ಷಿಗಳು, ಮಕ್ಕಳು ಹಾಗೂ ವೃದ್ಧರಿಗೆ ತೊಂದರೆ–